ಸಂಪುಟ : 10 ಸಂಚಿಕೆ: 167 ಪುಟ : 4+2 ಬೆಲೆ: 3.00 ಶುಕ್ರವಾರ ಆಗಸ್ಟ್ 08 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 167 Pages : 4+2 Price : 3.00 Friday August 08 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ನುಲಿಯ ಚಂದಯ್ಯನವರ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ನುಲಿಯ ಚಂದಯ್ಯನವರ ಜಯಂತಿ ಕಾರ್ಯಕ್ರಮವನ್ನು ಆಗಸ್ಟ್ 9 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು. ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ,ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ನಗರದ ವಿ ಡಿ ಎಸ್ ಬಾಲಕರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಎಂ ಸಿ ಕಟ್ಟಿಮನಿ ಅವರು ಉಪನ್ಯಾಸ ನೀಡಲಿದ್ದಾರೆ. ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಸ್ವಾಗತ ಕೋರಿದ್ದಾರೆ.

### ರಾಜ್ಯ ಡಾ. ಪಂ. ಪುಟ್ಟರಾಜ ರೈತ ಸಂಘದ ಅಧ್ಯಕ್ಷ ಎಂ.ಪಿ. ಮುಳಗುಂದ ಆರೋಪ

# ಗಾಳಿ ವಿದ್ಯುತ್ ಕಂಪನಿಗಳಿಂದ ರೈತರಿಗೆ ಮೋಸ




> ಗಾಳಿ ವಿದ್ಯುತ್ ತಯಾರಿಕಾ ಕಂಬ ಹಾಕಲು ಅನುಮತಿಸುವ ರೈತರ ಬಳಿ ಮಾಡಿಕೊಳ್ಳುವ ಒಪ್ಪಂದವು ಆಂಗ್ಲ ಭಾಷೆಯಲ್ಲಿ ಇದ್ದು, ಅದರ ಬದಲು ಕನ್ನಡದಲ್ಲಿ ಇರುವಂತೆ ಜಿಲ್ಲಾಡಳಿತ ತಾಕೀತು ಮಾಡಬೇಕು. ಇದರಿಂದ ರೈತರು ಕನಿಷ್ಠ ಷರತ್ತುಗಳನ್ನು ಓದಲು ಸಾಧ್ಯವಾಗಿ ಅದರ ನೈಜತೆ ಅರ್ಥವಾಗಲಿದೆ.
> **–ಎಂ.ಪಿ. ಮುಳಗುಂದ.**
> ಡಾ.ಪಂ.ಪುಟ್ಟರಾಜ ರೈತ ಸಂಘದ ಅಧ್ಯಕ್ಷರು.

■ ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಗಾಳಿ ವಿದ್ಯುತ್ ಕಂಬ ಸ್ಥಾಪಿಸುವ ಕಂಪನಿಗಳು ಜಮೀನು ವಿಚಾರದಲ್ಲಿ ರೈತರಿಗೆ ಮೋಸ ಮಾಡುತ್ತಿದ್ದು, ಕಂಪನಿಗಳಿಗೆ ಲಗಾಮು ಹಾಕಲು ಜಿಲ್ಲಾಡಳಿತ ಹಾಗೂ ಸರಕಾರ ಮುಂದಾಗಬೇಕು ಎಂದು ಕರ್ನಾಟಕ ರಾಜ್ಯ ಡಾ. ಪಂ. ಪುಟ್ಟರಾಜ ರೈತ ಸಂಘದ ಅಧ್ಯಕ್ಷ ಎಂ.ಪಿ. ಮುಳಗುಂದ ಹೇಳಿದರು. ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಗಾಳಿ ವಿದ್ಯುತ್ ಕಂಬ ಹಾಕಲು ಅನುಮತಿ ನೀಡುವ ರೈತರ ಬಳಿ ಒಂದು ಎಕರೆ ಖರೀದಿಸಿ, ಸುತ್ತಲಿನ ಐದು ಎಕರೆಯನ್ನು ಲೀಸ್‌ಗೆ ಪಡೆಯುತ್ತಿದ್ದಾರೆ. ಆದರೆ, ಈಚೆಗೆ ರೈತರ ಗಮನಕ್ಕೂ ತಾರದೇ ಖರೀದ ಮಾಡಿಕೊಂಡ ಒಂದು ಎಕರೆಯೂ ಸೇರಿ ಲೀಸ್‌ಗೆ ಪಡೆದ ಐದು ಎಕರೆಯನ್ನೂ 'ಭೂ ಪರಿವರ್ತನೆ' ಮಾಡಲು ಮುಂದಾಗುತ್ತಿದ್ದಾರೆ ಎಂದು ಆರೋಪಿಸಿದರು. ಕೆಲವೆಡೆ ಒಂದು ಕಂಬ ಹಾಕಲು ಐದಾರು ಎಕರೆ ಭೂಮಿಯನ್ನು ಖರೀದಿಸುತ್ತಿದ್ದು, ಇದರ ಹಿಂದೆ ಏಜೆಂಟರು ಹಾಗೂ ಕೆಲ ಪಟ್ಟಭದ್ರ ಹಿತಾಸಕ್ತಿಗಳು ಕೆಲಸ ಮಾಡುತ್ತಿವೆ. ಹೀಗಾಗಿ ಜಿಲ್ಲಾಡಳಿತ ಮಧ್ಯಪ್ರವೇಶಿಸಿ, ಕಂಪನಿಗಳಿಗೆ ಕಟ್ಟುನಿಟ್ಟಾದ ನಿರ್ದೇಶನ ನೀಡಬೇಕು. ಇಲ್ಲದಿದ್ದಲ್ಲಿ, ಭವಿಷ್ಯದಲ್ಲಿ ರೈತರ ಫಲವತ್ತಾದ ಭೂಮಿ ಹಾಳಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಲೀಸ್ ಕೊಟ್ಟ ಮೇಲೆ ಗಾಳಿ ವಿದ್ಯುತ್ ಕಂಬದ ಕಾಮಗಾರಿ ಮುಗಿದ ಬಳಿಕ ಉಳಿದ ಜಮೀನಿನಲ್ಲಿ ರೈತ ಬೆಳೆ ಬೆಳೆಯಬಹುದಾದರೂ ಒಂದು ವೇಳೆ ಪ್ರಕೃತಿ ವಿಕೋಪ ಅಥವಾ ಅನಾವೃಷ್ಟಿಗೆ ತುತ್ತಾದಾಗ ಬೆಳೆ ವಿಮೆ ವ್ಯಾಪ್ತಿಗೂ ಅದು ಒಳಪಡುವುದಿಲ್ಲ ಎನ್ನಲಾಗಿದೆ. ಕೂಡಲೇ ಈ ಬಗ್ಗೆ ಸ್ಪಷ್ಟೀಕರಣ ನೀಡಬೇಕು ಮತ್ತು ರೈತರ ಹಿತ ಕಾಪಾಡಲು ಜಿಲ್ಲಾಡಳಿತ ಮುಂದಾಗಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಶಂಭುನಾಥ ಅಂಗಡಿ, ಚನ್ನಪ್ಪ ಬಣಪ್ಪನವರ, ರಘುನಾಥರಡ್ಡಿ ಹುಚ್ಚಣ್ಣವರ, ಮಂಜುನಾಥ ಗುಡದೂರ, ಫಕ್ಕೀರಯ್ಯ ಕಣವಿ, ಸುಭಾಷರಡ್ಡಿ ಭೂಮಕ್ಕನವರ, ಕವಿತಾ ಗುಡದೂರ, ಕವಿತಾ ಮಬನೂರಕರ ಮುಂತಾದವರು ಇದ್ದರು.

### ಗದಗ ಐಎಂಎದಿಂದ ಹಮ್ಮಿಕೊಂಡಿದ್ದ ವಿಶ್ವ ಸ್ತನ್ಯಪಾನ ದಿನಾಚರಣೆಯಲ್ಲಿ ಡಾ. ವಿಶ್ವಾಸ ಬಗೂಟಿ

# ಸ್ತನ್ಯಪಾನದಿಂದ ರೋಗನಿರೋಧಕ ಶಕ್ತಿ ವೃದ್ಧಿ




> ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಗದಗ ಐಎಂಎ ನಿಕಟಪೂರ್ವ ಅಧ್ಯಕ್ಷೆ, ಸ್ತ್ರೀ ರೋಗ ತಜ್ಞೆ ಡಾ. ರಾಧಿಕಾ ಕುಲಕರ್ಣಿ, ಸ್ತನ್ಯಪಾನದಿಂದ ದೀರ್ಘಕಾಲದ ಕಾಯಿಲೆಗಳ ಅಪಾಯ ಕಡಿಮೆಯಾಗುವವು. ಎದೆಹಾಲು ಕುಡಿದ ಶಿಶುಗಳಿಗೆ ನಂತರದ ಜೀವನದಲ್ಲಿ ಬೊಜ್ಜು, ಮಧುಮೇಹ, ಆಸ್ತಮಾ ಮತ್ತು ಕೆಲವು ಅಲರ್ಜಿಗಳು ಬರುವ ಸಾಧ್ಯತೆ ಕಡಿಮೆ. ಸ್ತನ್ಯಪಾನವು ಶಿಶುಗಳ ಕಾಯಿಲೆಗಳು ಮತ್ತು ಆಸ್ಪತ್ರೆಗೆ ದಾಖಲಾಗುವುದನ್ನು ಕಡಿಮೆ ಮಾಡುವ ಮೂಲಕ ಆರೋಗ್ಯ ವೆಚ್ಚವನ್ನು ಉಳಿಸುತ್ತದೆ. ತಾಯಿಯ ಎದೆಹಾಲು ಅಷ್ಟೊಂದು ಮಹತ್ವವನ್ನು ಪಡೆದಿದೆ ಎಂದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ತನ್ಯಪಾನವು ಮಕ್ಕಳ ಆರೋಗ್ಯ ಮತ್ತು ಬೆಳವಣಿಗೆಯ ಒಂದು ಮೂಲಾಧಾರವಾಗಿದೆ. ಅತ್ಯುತ್ತಮ ಪೋಷಣೆಯೊಂದಿಗೆ ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ. ಸ್ತನ್ಯಪಾನವು ತಾಯಿ ಮತ್ತು ಮಗುವಿನ ನಡುವೆ ಒಂದು ವಿಶಿಷ್ಟ ಬಾಂಧವ್ಯವನ್ನು ಬೆಳೆಸುತ್ತದೆ ಎಂದು ಗದುಗಿನ ಸ್ತ್ರೀರೋಗ ತಜ್ಞ ವೈದ್ಯರಾದ ಡಾ. ವಿಶ್ವಾಸ ಬಗೂಟಿ ಹೇಳಿದರು.

ಅವರು ಬುಧವಾರ ಗದಗ ಐಎಂಎ ನಗರದ ಡಾ. ಉದಯ ಕುಲಕರ್ಣಿ ಹೆರಿಗೆ ಆಸ್ಪತ್ರೆಯ ಆವರಣದಲ್ಲಿ ಏರ್ಪಡಿಸಿದ್ದ ವಿಶ್ವ ಸ್ತನ್ಯಪಾನ ಸಪ್ತಾಹದ ಅಂಗವಾಗಿ ಮಹಿಳೆಯರಿಗೆ ಏರ್ಪಡಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಪ್ರತಿವರ್ಷ ಆಗಸ್ಟ್ 1ರಿಂದ 7ರವರೆಗೆ ವಿಶ್ವ ಸ್ತನ್ಯಪಾನ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಮಗು ಜನಿಸಿದ ಅರ್ಧ ಗಂಟೆಯೊಳಗೆ ತಾಯಿಯು ಮಗುವಿಗೆ ಎದೆಹಾಲು ಕುಡಿಸಬೇಕು. ಸ್ತನ್ಯಪಾನ ಮಹತ್ವದ ಪೋಷಕಾಂಶಗಳನ್ನು ಒದಗಿಸುತ್ತದೆ, ಆರೋಗ್ಯ ಪ್ರಯೋಜನಗಳನ್ನು ನೀಡುತ್ತದೆ. ನ್ಯುಮೋನಿಯಾ, ಪ್ರಾಣಾಂತಿಕ ರೋಗಗಳಿಂದ ರಕ್ಷಣೆ ನೀಡಿ, ಮಗುವಿನ ಬೆಳವಣಿಗೆಯನ್ನು ಅಭಿವೃದ್ಧಿಪಡಿಸುತ್ತದೆ ಎಂದರು.

ಎದೆ ಹಾಲು ಶಿಶುವಿನ ಅಗತ್ಯಗಳಿಗೆ ಅನುಗುಣವಾಗಿ ಮ್ಯಾಕ್ರೋನ್ಯೂಟ್ರಿಯೆಂಟ್‌ಗಳು ಮತ್ತು ಸೂಕ್ಷ್ಮ ಪೋಷಕಾಂಶಗಳ ಪರಿಪೂರ್ಣ ಸಮತೋಲನವನ್ನು ಒದಗಿಸುತ್ತದೆ. ಇದು ಸುಲಭವಾಗಿ ಜೀರ್ಣವಾಗುತ್ತದೆ ಮತ್ತು ಅತ್ಯುತ್ತಮ ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಹಸುವಿನ ಹಾಲಿಗಿಂತ ತಾಯಿಯ ಎದೆಹಾಲು ಮಗುವಿಗೆ ಅಮೃತದಂತೆ ಹಾಗೂ ರೋಗನಿರೂಧಕ ಶಕ್ತಿಯುಳ್ಳದ್ದಾಗಿದೆ ಎಂದರು.

ಡಾ. ಉದಯ ಕುಲಕರ್ಣಿ ಹಾಗೂ ಡಾ. ರಾಧಿಕಾ ಕುಲಕರ್ಣಿ ಅವರು ಪ್ರತಿ ವರ್ಷ ವಿಶ್ವ ಸ್ತನ್ಯಪಾನ ಸಪ್ತಾಹದ ಅಂಗವಾಗಿ ಮಹಿಳೆಯರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡಿಕೊಂಡು ಬಂದಿರುವದು ಅಭಿನಂದನೀಯ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಡಾ. ಉದಯ ಕುಲಕರ್ಣಿ ಮಾತನಾಡಿ, ಶಿಶುಗಳಿಗೆ ಎದೆ ಹಾಲು ಸೂಕ್ತ ಆಹಾರವಾಗಿದೆ. ಇದು ಮಗುವಿನ ಆರೋಗ್ಯಕರ ಬೆಳವಣಿಗೆಗೆ ಅಗತ್ಯವಾದ ಎಲ್ಲಾ ಪೋಷಕಾಂಶಗಳು, ಬೆಳವಣಿಗೆಯ ಅಂಶಗಳನ್ನು ಒಳಗೊಂಡಿದೆ. ಮಗುವಿನ ದೈಹಿಕ ಮತ್ತು ಅರಿವಿನ ಯೋಗಕ್ಷೇಮದ ▸▸ 3ನೇ ಪುಟಕ್ಕೆ

# ತಪ್ಪದ 'ಯೂರಿಯಾ' ಯುದ್ಧ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ 1 ತಿಂಗಳಿಂದಲೂ ಯೂರಿಯಾ ಗೊಬ್ಬರಕ್ಕಾಗಿ ರೈತರು ಸರದಿ ಸಾಲಿನಲ್ಲಿ ನಿಂತು ನೂಕು–ನುಗ್ಗಾಟದೊಂದಿಗೆ ಪೊಲೀಸರ ಕಾವಲಿನಲ್ಲಿ ಒಬ್ಬರಿಗೆ 1 ಚೀಲದಂತೆ ಗೊಬ್ಬರ ಪಡೆಯುವ ಪರಿಸ್ಥಿತಿ ತಪ್ಪದಂತಾಗಿದೆ.

ಮುಂಗಾರಿನ ಸಕಾಲಿಕ ಮಳೆಯಿಂದ ಬಿತ್ತನೆ ಮಾಡಿದ ಬೆಳೆಗಳು ಸಮೃದ್ಧವಾಗಿ ಬೆಳೆದು ಈಗ ಫಲ ಬಿಡುವ ಹಂತದಲ್ಲಿವೆ. ಕಳೆದ ಎರಡು ದಿನಗಳಿಂದ ತಾಲೂಕಿನಾದ್ಯಂತ ಉತ್ತಮ ಮಳೆಯಾಗಿದ್ದರಿಂದ ಬೆಳೆಗೆ ಯೂರಿಯಾ ಹಾಕಲು ಮತ್ತೆ ಯೂರಿಯಾಕ್ಕಾಗಿ ಅಲೆದಾಡುತ್ತಿದ್ದಾರೆ. ಯೂರಿಯಾ ಬರುವುದನ್ನೇ ಕಾಯುತ್ತಿರುವ ರೈತರು ಗುರುವಾರ ಪಟ್ಟಣದ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘಕ್ಕೆ ಗೊಬ್ಬರ ಬಂದಿರುವ ಸುದ್ದಿ ತಿಳಿದು ಏಕಕಾಲಕ್ಕೆ ಜಮಾಯಿಸಿದ್ದರು.

ನೂಕುನುಗ್ಗಲು ಉಂಟಾಗಿ, ರೈತರು ಪರಸ್ಪರ ವಾಗ್ವಾದಕ್ಕಿಳಿದ ಘಟನೆಗಳು ನಡೆದವು. ವಿಷಯ ತಿಳಿದ ಪೊಲೀಸರು ಆಗಮಿಸಿ ರೈತರನ್ನು ಸಾಲಿನಲ್ಲಿ ನಿಲ್ಲಿಸಿದರು. 500 ಚೀಲ ಯೂರಿಯಾ ಬಂದಿದ್ದರಿಂದ ಎಲ್ಲರಿಗೂ ಸಿಗಬೇಕು ಎಂಬ ಉದ್ದೇಶದಿಂದ 1 ಆಧಾರ್ ಕಾರ್ಡ್‌ಗೆ 1 ಚೀಲ ಯೂರಿಯಾ ಕೊಡಬೇಕು ಎಂದು ಕೃಷಿ ಇಲಾಖೆ ಮತ್ತು ಪೊಲೀಸರು ಸೂಚಿಸಿದರು. ರೈತರು ತಮ್ಮ ಮಕ್ಕಳು ಸೇರಿ ಕುಟುಂಬದ ಸದ್ಯಸರೊಡಗೂಡಿ ಆಧಾರ್ ಕಾರ್ಡ್ ಹಿಡಿದು ಸರದಿ ಸಾಲಿನಲ್ಲಿ ನಿಂತು ಯೂರಿಯಾ ಪಡೆದು ಹೋದರು. ಸರದಿಯಲ್ಲಿ ನಿಂತಿದ್ದ ಅರ್ಧಕ್ಕಿಂತ ಹೆಚ್ಚು ರೈತರು ಬರಿಗೈಲಿ ವಾಪಸ್ಸಾದರು.

ಗದಗ ಜಿಲ್ಲೆಗೆ ಗೊಬ್ಬರ ಪೂರೈಕೆಯಲ್ಲಿ ಪ್ರತಿಬಾರಿ ಮಲತಾಯಿ ಧೋರಣೆ ಎದ್ದು ಕಾಣುತ್ತಿದೆ. ಜಿಲ್ಲೆಗೆ ಅವಶ್ಯವಿರುವಷ್ಟು ಗೊಬ್ಬರವನ್ನು ಕಂಪನಿಯವರು ಪೂರೈಕೆ ಮಾಡುತ್ತಿಲ್ಲ. ಈ ನಡುವೆ ಯೂರಿಯಾ ಅವಶ್ಯಕತೆ ಇಲ್ಲದ ಕೆಲವರು ಪ್ರತಿಬಾರಿ ಯೂರಿಯಾ ಬಂದಾಗ ಸರದಿಯಲ್ಲಿ ನಿಂತು ಯೂರಿಯಾ ಗೊಬ್ಬರ ಸಂಗ್ರಹಿಸಿ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿದ್ದಾರೆ ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿವೆ.

### ಆಗಸ್ಟ್ 15ರಿಂದ 19ರವರೆಗೆ ಜಿಲ್ಲಾ ಮಟ್ಟದ ಕೈಗಾರಿಕಾ ವಸ್ತು ಪ್ರದರ್ಶನ

# ವಿವಿಧ ಉತ್ಪನ್ನಗಳ ಪ್ರದರ್ಶನ, ಮಾರಾಟ

■ ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್ ಗದಗ ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಆಗಸ್ಟ್ 15ರಿಂದ 19ರವರೆಗೆ ಶ್ರೀ ಸ್ವಾಮಿ ವಿವೇಕಾನಂದ ಸಭಾ ಭವನ ಹಾಗೂ ಕೆ.ಹೆಚ್. ಪಾಟೀಲ ಸಭಾಭವನ ಗದಗದಲ್ಲಿ ಜಿಲ್ಲಾ ಮಟ್ಟದ ಕೈಗಾರಿಕಾ ವಸ್ತು ಪ್ರದರ್ಶನವನ್ನು ಏರ್ಪಡಿಸಲಾಗಿದೆ. ▸▸ 3ನೇ ಪುಟಕ್ಕೆ

> ವಸ್ತು ಪ್ರದರ್ಶನದಲ್ಲಿ ಕರಕುಶಲ, ಖಾದಿ ಮತ್ತು ಜವಳಿ ಉತ್ಪನಗಳು, ಬಿದಿರು, ಬೆತ್ತದ ಉತ್ಪನಗಳು, ಬ್ಯಾಡಗಿ ಖಾರದ ಪುಡಿ, ಮಸಾಲಾ ಉತ್ಪನಗಳು ಹಾಗೂ ಆಹಾರ ಉತ್ಪನಗಳು, ಗ್ರಾಮೀಣ ಕುಂಬಾರಿಕೆ, ಟೆರಾಕೋಟ್ ಕಟ್ಟಿಗೆಯ ಗೊಂಬೆಗಳು, ಆಟಿಕೆ ಸಾಮಗ್ರಿಗಳು ಮತ್ತು ಅಗರ ಬತ್ತಿ, ರೇಷ್ಮೆ ಕಸೂತಿ ಸೀರೆಗಳು, ಚರ್ಮದ ಉತ್ಪನ್ನಗಳು, ಸೆಣಬಿನ ಬ್ಯಾಗ್, ಕಾಟನ್ ಬ್ಯಾಗ್, ವಿಶೇಷವಾಗಿ ಗದಗ ಶಿಗ್ಗಿ ಮತ್ತು ಗಜೇಂದ್ರಗಡದ ಕೈಮಗ್ಗ ಉತ್ಪನಗಳು ಸಾರ್ವಜನಿಕರ ಪ್ರದರ್ಶನ ಮತ್ತು ಮಾರಾಟಕ್ಕೆ ಲಭ್ಯವಿರುತ್ತದೆ.



# ಗದಗದಲ್ಲಿ ನಿಲ್ಲದ 'ಯೂರಿಯಾ' ಗೋಳು: ರಸಗೊಬ್ಬರಕ್ಕಾಗಿ ಅನ್ನದಾತರ ಪರದಾಟ!




■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಯೂರಿಯಾ ಗೊಬ್ಬರ ಗೋಳಾಟ ಇನ್ನೂ ನಿಂತಿಲ್ಲ. ಸರ್ಕಾರ ಗೊಬ್ಬರ ಕೊರತೆ ಇಲ್ಲ ಎನ್ನುತ್ತಿದೆ. ಆದರೆ, ರೈತರಿಗೆ ಮಾತ್ರ ಗೊಬ್ಬರ ಸಿಗುತ್ತಿಲ್ಲ.

ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರಕ್ಕಾಗಿ ರೈತರ ಪರದಾಟ ಮುಂದುವರಿದಿದೆ. ಜಿಲ್ಲೆಯಲ್ಲಿ ಮಳೆ ಇನ್ನೂ ನಿಂತಿಲ್ಲ. ಅತಿಯಾದ ಮಳೆಯಿಂದ ತೇವಾಂಶ ಹೆಚ್ಚಾಗಿ ಗೋವಿನ ಜೋಳ ಕೊಳೆಯುತ್ತಿದೆ. ಸಕಾಲಕ್ಕೆ ಯೂರಿಯಾ ಹಾಕದಿದ್ದರೆ ಬೆಳೆ ಸಂಪೂರ್ಣ ಹಾನಿಯಾಗಲಿದೆ. ಹೀಗಾಗಿ ಅನ್ನದಾತರು ಗೊಬ್ಬರಕ್ಕಾಗಿ ಅನ್ನ, ನೀರು, ನಿದ್ದೆ ಬಿಟ್ಟು ಹಗಲು, ರಾತ್ರಿ ಕಾಯುತ್ತಿದ್ದಾರೆ. ಆದರೆ, ರೈತರಿಗೆ ಗೊಬ್ಬರ ಸಿಗ್ತಿಲ್ಲ.

ಇನ್ನೂ ಗದಗದ ಎಸ್ ವಿ ಹಲವಾಗಲಿ ವಿತರಣೆಯ ಅಂಗಡಿಗೆ ಗುರುವಾರ ಬೆಳಿಗ್ಗೆ ನೋ ಸಾಕ್ಟ್ ಬೋರ್ಡ್ ಹಾಕಲಾಗಿದ್ದು, ಕೃಷಿ ಇಲಾಖೆ ವಿರುದ್ಧ ರೈತರು ಆಕ್ರೋಶ ಹೊರ ಹಾಕಿದರು. ಬೆಳ್ಳಂ ಬೆಳಗ್ಗೆ ಯೂ–ರಿಯಾ ಗೊಬ್ಬರಕ್ಕಾಗಿ ಅನ್ನದಾತರು ಗೋಳಾಟ ನಡೆಸಿದ್ದಾರೆ. ಗದಗ ನಗರದ ನಾಮಜೋಶಿ ರಸ್ತೆಯಲ್ಲಿರುವ ಯೂರಿಯಾ ವಿತರಣೆಯ ಅಂಗಡಿ ಬಳಿ ಬೆಳ್ಳಂ ಬೆಳಗ್ಗೆ ಸುಮಾರು 4–5 ಗಂಟೆಗೆ ರೈತರು ಕ್ಯೂ ನಿಂತಿದ್ದರು.

ಗೋವಿನಜೋಳ ಬೆಳೆಗೆ ಗೊಬ್ಬರ ಹಾಕಲು ಪರದಾಟ ನಡೆಸಿರುವ ಅನ್ನದಾತರು, ಸಾಲಾಸೋಲ ಮಾಡಿ ಗೋವಿನಜೋಳ ಬಿತ್ತನೆ ಮಾಡಿದ್ದೇವೆ. ಬಿತ್ತನೆ ಮಾಡಿದ ಬೆಳೆ ಜಮೀನಲ್ಲಿ ಹಾಳಾಗುತ್ತಿದೆ. ಯೂರಿಯಾ ಗೊಬ್ಬರಕ್ಕಾಗಿ ಅಲೆದಾಡುತ್ತಿದ್ದೇವೆ. ನಮ್ಮ ಗೋಳು ಜಿಲ್ಲಾಡಳಿತ, ಕೃಷಿ ಇಲಖೆ ಕೇಳುತ್ತಿಲ್ಲೆಂದು ಆಕ್ರೋಶ ಹೊರ ಹಾಕಿದರು. ಯೂರಿಯಾ ಸಿಗದೆ ಮರಳಿ ತಮ್ಮ ಮನೆಗಳತ್ತ ರೈತರು ಹೋದರು.

ಒಟ್ಟಾರೆ ಗದಗ ನಗರದಲ್ಲೇ ಗೊಬ್ಬರಕ್ಕಾಗಿ ಇಷ್ಟೊಂದು ರಾದ್ಧಾಂತ ನಡೆದರೂ ಜಿಲ್ಲಾಡಳಿತ, ಕೃಷಿ ಇಲಾಖೆ ಕ್ಯಾರೇ ಅನ್ನುತ್ತಿಲ್ಲ. ರೈತರ ಮಕ್ಕಳು ಶಿಕ್ಷಣ ಬಿಟ್ಟು ಗೊಬ್ಬರಕ್ಕಾಗಿ ಕಾಯುತ್ತಿರುವ ದೃಶ್ಯಗಳು ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

### ರಸಗೊಬ್ಬರ ಅಭಾವ

| | |
|---|---|
| ಬೇಡಿಕೆ | 23614 ಮೆಟ್ರಿಕ್ ಟನ್. |
| ಪೂರೈಕೆ | 22497 ಮೆಟ್ರಿಕ್ ಟನ್. |
| ವಿತರಣೆ | 21674 ಮೆಟ್ರಿಕ್ ಟನ್. |
| ಕೊರತೆ | 5836 ಮೆಟ್ರಿಕ್ ಟನ್. |
| ಸ್ಟಾಕ್ | 823 ಮೆಟ್ರಿಕ್ ಟನ್. |



## ಸಂಪಾದಕೀಯ

# ಪ್ರಜಾಪ್ರಭುತ್ವದ ಅಡಿಪಾಯಕ್ಕೆ ಕನ್ನ: ಮತದಾರರ ಪಟ್ಟಿ ಅಕ್ರಮದ ಗಂಭೀರತೆ

ಭಾರತದ ಪ್ರಜಾಪ್ರಭುತ್ವದ ತಳಹದಿಯೇ ನ್ಯಾಯಯುತ ಚುನಾವಣೆಗಳು. ಆದರೆ, ಚುನಾವಣಾ ಪ್ರಕ್ರಿಯೆಯ ಮೂಲಭೂತ ಅಂಶವಾದ ಮತದಾರರ ಪಟ್ಟಿಯೇ ಅಕ್ರಮಗಳ ತಾಣವಾಗುತ್ತಿದೆ ಎಂಬ ಆರೋಪಗಳು ನಮ್ಮ ಪ್ರಜಾಪ್ರಭುತ್ವದ ಭವಿಷ್ಯದ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿವೆ.


ಗುರುವಾರ (ಆ.07) ನಡೆದ ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರು ಕರ್ನಾಟಕದ ಮತದಾರರ ಪಟ್ಟಿಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ನೇರ ಆರೋಪ ಮಾಡಿರುವುದು ಈ ವಿಷಯದ ಗಂಭೀರತೆಯನ್ನು ಮತ್ತಷ್ಟು ಹೆಚ್ಚಿಸಿದೆ. ರಾಹುಲ್ ಗಾಂಧಿ ಅವರು ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಭಯಂಕರ ಕಳ್ಳತನ ನಡೆದಿದೆ ಎಂದು ಆರೋಪಿಸಿದ್ದು, 6.5 ಲಕ್ಷ ಮತಗಳ ಪೈಕಿ ಒಂದು ಲಕ್ಷಕ್ಕೂ ಹೆಚ್ಚು ಮತಗಳು ಕಣ್ಮರೆಯಾಗಿವೆ ಎಂದು ಹೇಳಿದ್ದಾರೆ.

ಈ ಆರೋಪವು ಕೇವಲ ಒಂದು ರಾಜಕೀಯ ಹೇಳಿಕೆಯಲ್ಲ, ಬದಲಾಗಿ ಪ್ರಜಾಪ್ರಭುತ್ವದ ನೈತಿಕತೆ ಮತ್ತು ಪಾರದರ್ಶಕತೆಗೆ ನೇರವಾಗಿ ಸವಾಲು ಹಾಕುವಂತಹದ್ದು. ಈ ರೀತಿಯ ಅಕ್ರಮಗಳು ಮತದಾರರ ಹಕ್ಕುಗಳನ್ನು ಕಸಿಯುವುದಲ್ಲದೆ, ಜನರ ವಿಶ್ವಾಸವನ್ನೂ ಅಲುಗಾಡಿಸುತ್ತವೆ. ಮತದಾರರ ಪಟ್ಟಿಯಲ್ಲಿ ಅಕ್ರಮ ನಡೆಯುತ್ತಿರುವುದು ಇದೇ ಮೊದಲೇನಲ್ಲ. ಹಿಂದೆಯೂ ಇಂತಹ ಆರೋಪಗಳು ಕೇಳಿಬಂದಿದ್ದವು. ಆದರೆ, ಚುನಾವಣಾ ಆಯೋಗ ಮತ್ತು ಸಂಬಂಧಪಟ್ಟ ಇಲಾಖೆಗಳು ಈ ಬಗ್ಗೆ ಕಠಿಣ ಕ್ರಮ ಕೈಗೊಳ್ಳದೆ ಇರುವುದು ಮತ್ತಷ್ಟು ಇಂತಹ ಘಟನೆಗಳಿಗೆ ದಾರಿ ಮಾಡಿಕೊಡುತ್ತಿದೆ. ಈ ಪ್ರಕರಣದಲ್ಲಿ, ಒಂದು ಲಕ್ಷಕ್ಕೂ ಹೆಚ್ಚು ಮತಗಳ ವ್ಯತ್ಯಾಸ ಕಂಡುಬಂದಿದೆ ಎಂಬ ಆರೋಪ ಕೇಳಿಬಂದಿರುವಾಗ, ಇದರ ಹಿಂದಿನ ಕಾರಣಗಳು ಮತ್ತು ಉದ್ದೇಶಗಳ ಬಗ್ಗೆ ಸಂಪೂರ್ಣ ತನಿಖೆ ನಡೆಯಬೇಕು. ಈ ಅಕ್ರಮಗಳಿಗೆ ಯಾರು ಹೊಣೆಗಾರರು ಮತ್ತು ಈ ಹಿಂದಿನಿಂದಲೂ ಇಂತಹ ತಪ್ಪಿತಸ್ಥರನ್ನು ಏಕೆ ಪತ್ತೆ ಹಚ್ಚಿ ಶಿಕ್ಷಿಸಲಾಗಿಲ್ಲ ಎಂಬುದು ಸ್ಪಷ್ಟವಾಗಬೇಕು. ಪ್ರಜಾಪ್ರಭುತ್ವದಲ್ಲಿ ಪ್ರತಿಯೊಂದು ಮತವೂ ಅಮೂಲ್ಯ. ಮತದಾರರ ಪಟ್ಟಿಯನ್ನು ದುರುಪಯೋಗ ಪಡಿಸಿಕೊಳ್ಳುವುದು, ನಕಲಿ ಮತದಾರರನ್ನು ಸೇರಿಸುವುದು ಅಥವಾ ಅರ್ಹ ಮತದಾರರ ಹೆಸರನ್ನು ತೆಗೆದುಹಾಕುವುದು ದೇಶದ ಭವಿಷ್ಯದ ಮೇಲೆ ನೇರವಾಗಿ ಪರಿಣಾಮ ಬೀರುತ್ತದೆ.

ಚುನಾವಣಾ ಆಯೋಗವು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಯಾವುದೇ ರಾಜಕೀಯ ಒತ್ತಡಗಳಿಗೆ ಮಣಿಯದೆ, ತಕ್ಷಣವೇ ನಿಷ್ಪಕ್ಷಪಾತ ತನಿಖೆಗೆ ಆದೇಶಿಸಬೇಕು. ಅಕ್ರಮಗಳು ನಡೆದಿರುವುದು ಸಾಬೀತಾದರೆ, ಅದಕ್ಕೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ನಾಗರಿಕ ಸಮಾಜ ಮತ್ತು ಮಾಧ್ಯಮಗಳು ಕೂಡ ಈ ವಿಷಯದ ಬಗ್ಗೆ ಎಚ್ಚರ ವಹಿಸಬೇಕು. ನಮ್ಮ ಪ್ರಜಾಪ್ರಭುತ್ವದ ಪಾವಿತ್ರ್ಯವನ್ನು ಕಾಪಾಡಿಕೊಳ್ಳುವುದು ಎಲ್ಲರ ಜವಾಬ್ದಾರಿ. ಇಲ್ಲವಾದರೆ, ಮತದಾನದ ಹಕ್ಕಿನ ಮೇಲೆ ಜನರಿಗಿರುವ ನಂಬಿಕೆ ಕಳೆದುಹೋಗಿ, ನಮ್ಮ ಪ್ರಜಾಪ್ರಭುತ್ವದ ಅಡಿಪಾಯವೇ ಶಿಥಿಲವಾಗಬಹುದು. ಇದು ಕೇವಲ ರಾಜಕೀಯ ವಿವಾದವಲ್ಲ, ಬದಲಾಗಿ ದೇಶದ ಭವಿಷ್ಯದ ಪ್ರಶ್ನೆ.

## ಕವನ

# ಸಂತಸದ ಗಾಯನದ ಕುಂಚದಲ್ಲಿ ಅರಳುತ್ತಿರುವ ಸಂತೋಷ ಮಡಿವಾಳರ



ಸಂತಸದ ಗಾಯನದ ಕುಂಚದಲ್ಲಿ
ಅರಳುತ್ತಿರುವ ಸಂತೋಷ ಮಡಿವಾಳರ
ಸಂತಸದ ಗಾಯನದ ಕೂಟದಲ್ಲಿ
ಜಾನಪದ ಗೀತೆಗಳ ಹಾಡುವ ಈ ಹಮ್ಮೀರ
ಸಂತೋಷ ಎಂಬ ಕಿರುನೋಟದ
ನಾಮಾಂಕಿತದಲ್ಲಿ ಈ ಗಾಯನದ ಗಾಯಕ
ಸಂತೋಷ ಸಡಗರ ಸಂಭ್ರಮದ ವಾತಾವರಣದಲ್ಲಿ ಪ್ರೀತಿ ಗಳಿಸಿದ ಈ ನಾಯಕ

ಸಮಾಜದಲ್ಲಿ ಸಂಗೀತ ಸಾಹಿತ್ಯ ಕಲೆಗಳಿಗೆ ಬೆಲೆ ಕಟ್ಟಲು ಯಾರಿಂದಲೂ ಸಾಧ್ಯವಿಲ್ಲ
ಸಮಾಜದಲ್ಲಿ ಈಗ ಅನುಪಮವಾದ ಈ ಪ್ರೀತಿ ವಿಶ್ವಾಸಕ್ಕೆ ಯಾರ ಆಹ್ವಾನವು ಬೇಕಿಲ್ಲ
ತಣ್ಣನೆಯ ತಂಪಾದ ಬೀಸುವ ಈ ಗಾಳಿಯು ಮನ ಮನಸ್ಸಿಗೆ ಸಂತೋಷ ನೀಡುತ್ತದೆ
ಜಾನಪದ ಹಾಡುವ ಹಾಡುಗಳಿಂದ ಅಭಿಮಾನಿಗಳ ಹೃದಯ ಪ್ರೀತಿಯು ಹೆಚ್ಚಿಸುತ್ತದೆ

ತಂದೆ ಹನುಮಂತಪ್ಪ ಮಡಿವಾಳರ ತಾಯಿ ನೀಲವ್ವರವರ ಈ ಪುಣ್ಯಗರ್ಭದಲ್ಲಿ ಜನಿಸಿ
ಕಡು ಬಡತನದಲ್ಲಿ ಕಷ್ಟದ ದಿನಗಳಲ್ಲಿ ಹೆತ್ತವರ ಅಪಾರವಾದ ಪ್ರೀತಿಯ ಸಂಪಾದಿಸಿ
ಬಾಲ್ಯದ ಶಾಲಾ ಶಿಕ್ಷಣವನ್ನು ಏಳೆಂಟು ತರಗತಿವರೆಗೂ ಬನ್ನಿಕೊಪ್ಪದಲ್ಲಿ ಕಲಿತವರು
ಬದುಕಿನ ಈ ಜೀವನಕ್ಕೆ ಹೋಟೇಲ್‌ನಲ್ಲಿ ಕೂಲಿಯ ಕಾಯಕವನ್ನು ಮಾಡುವವರು

ಇವರು ಕಾಯಕದ ಬಿಡುವಿನಲ್ಲಿ ತಮ್ಮ ಶೈಲಿಯಲ್ಲಿ ಈ ಜಾನಪದಗಳನ್ನು ಬರೆದವರು
ಬರೆದಿರುವ ಜಾನಪದ ಗೀತೆಗಳನ್ನು ಹಾಡುತ ತಮ್ಮ ಹೃದಯದಲ್ಲಿ ಕುಣಿದಾಡಿದವರು
ಸದಾ ಮುಂಗುರುಳಿನ ಮುಗುಳು ನಗೆಯನ್ನು ಬೀರುವ ಉದಯೋನ್ಮುಖ ಸರದಾರ
ಗೆಳೆಯರ ಅಂತರಂಗದಲ್ಲಿ ಮನೆ ಮಾತಾದ ಈ ಮಣ್ಣಿನ ಮಗ ಈ ಕರುನಾಡಿನ ವೀರ

ಈ ಕುವರನಿಗೆ ಬರೆಯುವುದು ಹಾಡುವುದು ಎಂದರೆ ಎಲ್ಲಿಲ್ಲದ ಹರ್ಷದ ಸಂತೋಷ
ಈ ಕುವರನು ಮಧುರವಾದ ಗಾಯನವನ್ನು ಸ್ಟುಡಿಯೊದಲ್ಲಿ ಹಾಡಿರುವುದು ವಿಶೇಷ
ಸಣ್ಣಪುಟ್ಟವಾದ ವಯಸ್ಸಿನಲ್ಲಿ ಸಾಧಕರ ಸಾಲಿನಲ್ಲಿ ಸಾಗುತ್ತಿರುವುದು ಆರಾಧನೀಯ
ಸಣ್ಣಪುಟ್ಟವಾದ ವಯಸ್ಸಿನಲ್ಲಿ ನಾಡಿಗೆ ಸೇವಕನಾದ ಸಂತೋಷಗೆ ಅಭಿನಂದನೀಯ

– **ಸಿ.ಆರ್. ಗಡಾದ,** ಗದಗ

## ಶ್ರಾವಣ ಶುಕ್ರವಾರದ ವರಮಹಾಲಕ್ಷ್ಮೀ ಹಬ್ಬದ ನಿಮಿತ್ತ ವಿಶೇಷ ಲೇಖನ

# ಸಿರಿ-ಸಂಪತ್ತಿನ ಅಧಿದೇವತೆಯ ಹಬ್ಬ



ಲಕ್ಷ್ಮೀದೇವಿಯು ಶ್ರೀಮನ್ಮಹಾವಿಷ್ಣುವಿನ ಪತ್ನಿ. ಭೃಗು ಮಹರ್ಷಿಗಳ ಮಗಳು. ಅಸುರರು ಮತ್ತು ದೇವತೆಗಳು ಅಮೃತಕ್ಕಾಗಿ ಹಣಾಹಣಿ ಮಾಡುವಾಗ ಅವರವರಲ್ಲಿ ಜಗಳವು ಪ್ರಾರಂಭವಾಗಿ ಅಂತಿಮವಾಗಿ ತ್ರಿಮೂರ್ತಿಗಳ ಆದೇಶದಂತೆ ವಿಂದ್ಯಗಿರಿಗೆ ವಾಸುಕಿಯನ್ನು ಕಟ್ಟಿ ಕ್ಷೀರಸಾಗರವನ್ನು ಮಂಥನ ಮಾಡಲು ಆರಂಭಿಸಿದರು. ಹಾಗೆ ಮಂಥನ ಮಾಡಿದಾಗ ಬಹಳ ಕಾಲದ ನಂತರ ಒಂದೊಂದೇ ವಸ್ತುಗಳು ಮೇಲೆ ಬರಲಾರಂಭಿಸಿದವು. ಒಂದು ಬಾರಿ ತಾಯಿ ಲಕ್ಷ್ಮೀದೇವಿಯ ಕೂಡ ಹಾಲಿನ ಕಡಲಿಂದ ಜನಿಸಿ ಬಂದಳು.

ಹಾಗೆ ಹಾಲಿನ ಕಡಲಿಂದ ಜನಿಸಿ ಬಂದ ಲಕ್ಷ್ಮೀದೇವಿಯನ್ನು ಮಹಾವಿಷ್ಣುವು ಧರ್ಮಪತ್ನಿಯಾಗಿ ಸ್ವೀಕರಿಸಿದನು. ಸ್ಥಿತಿಕರ್ತನಾದ ಮಹಾವಿಷ್ಣುವಿನ ಪತ್ನಿಯಾದ ಮಹಾಲಕ್ಷ್ಮೀಯು ಸಿರಿ-ಸಂಪತ್ತು, ಹಣ, ಐಶ್ವರ್ಯ, ಒಡವೆಗಳ ಅಧಿದೇವತೆಯಾಗಿ ನಿಂತಳು. ಆಕೆಯನ್ನು ಪೂಜಿಸಿದ ಭಕ್ತರಿಗೆ ತನ್ನ ವರದ ಹಸ್ತದಿಂದ ಅನುಗ್ರಹಿಸುವ ಮೂಲಕ ಅವರ ಕಷ್ಟ ಕಾರ್ಪಣ್ಯಗಳನ್ನು, ಬಡತನವನ್ನು ಮಹಾಲಕ್ಷ್ಮೀ ತಾಯಿಯು ದೂರ ಮಾಡುತ್ತಾಳೆ ಎಂಬ ಪ್ರತೀತಿ ನಮ್ಮ ಜನಮಾನಸದಲ್ಲಿ ಇದೆ.

ಪ್ರತೀ ಶುಕ್ರವಾರದ ದಿನ ನಮ್ಮ ಹೆಣ್ಣು ಮಕ್ಕಳು ವಿಶೇಷವಾಗಿ ಲಕ್ಷ್ಮೀ ದೇವಿಯನ್ನು ಪೂಜಿಸುತ್ತಾರೆ. ದೀಪಾವಳಿ ಹಬ್ಬ ಕೂಡ ಲಕ್ಷ್ಮೀ ದೇವಿಯ ಹೆಸರಿನಲ್ಲಿ ಆಚರಿಸಲ್ಪಡುತ್ತದೆ. ಹಿಂದೂಗಳ ಪಾಲಿಗೆ ಅತ್ಯಂತ ಪವಿತ್ರವಾದ ಮಾಸವಾದ ಶ್ರಾವಣದಲ್ಲಿ ಪ್ರತಿ ಶುಕ್ರವಾರದ ದಿನ ಸಂಪತ್ ಶುಕ್ರವಾರ ವ್ರತ ಆಚರಿಸುತ್ತಾರೆ. ಆದರೆ ಸಾಮಾನ್ಯವಾಗಿ ಶ್ರಾವಣ ಮಾಸದ ಎರಡನೇ ಶುಕ್ರವಾರ ಅದಕ್ಕೂ ಹೆಚ್ಚಾಗಿ ಶ್ರಾವಣದ ನೂಲ ಹುಣ್ಣಿಮೆಗೆ ಮುಂಚೆ ಬರುವ ಶುಕ್ರವಾರದ ದಿನ ವರಮಹಾಲಕ್ಷ್ಮೀ ಹಬ್ಬವನ್ನು ಆಚರಿಸುತ್ತಾರೆ.

ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಲ್ಲಿ ಈ ದಿನ ವಿಶೇಷವಾಗಿ ವರಮಹಾಲಕ್ಷ್ಮೀ ದೇವಿಯ ಪೂಜೆ, ಆರಾಧನೆಗಳು ನಡೆಯುತ್ತವೆ. ಸಂಸ್ಕೃತ ಮೂಲದ ಲಕ್ಷ್ಮೀ ಎಂಬ ಪದದ ಅರ್ಥ ಸಂಪತ್ತು ಮತ್ತು ಸಮೃದ್ಧಿ. ಲಕ್ಷ್ಮೀದೇವಿಯು ನಾಲ್ಕು ಕೈಗಳನ್ನು ಹೊಂದಿದ್ದು, ಅವುಗಳು ಚತುರ್ವಿಧ ಪುರುಷಾರ್ಥಗಳಾದ ಧರ್ಮ, ಅರ್ಥ, ಕಾಮ, ಮೋಕ್ಷ ಎಂಬ ಅಂಶಗಳನ್ನು ಪ್ರತಿನಿಧಿಸುತ್ತವೆ.

ಹಬ್ಬದ ಹಿಂದಿನ ದಿನವೇ ಹಬ್ಬಕ್ಕೆ ಬೇಕಾದ ಎಲ್ಲಾ ಸಾಮಗ್ರಿಗಳನ್ನು ತಂದಿಟ್ಟುಕೊಂಡರೆ, ಹಬ್ಬದ ದಿನ ಮುಂಜಾನೆ ಮನೆಯನ್ನು ಸಾರಿಸಿ, ಗುಡಿಸಿ, ವಿಧವಿಧದ ರಂಗೋಲಿಗಳಿಂದ ಅಂಗಳವನ್ನು ಅಲಂಕರಿಸುತ್ತಾರೆ. ಬಾಗಿಲಿಗೆ ತಳಿರು ತೋರಣಗಳನ್ನು ಕಟ್ಟಿ ಹೂವಿನ ಅಲಂಕಾರವನ್ನು ಮಾಡಿ ಸಿಂಗರಿಸುತ್ತಾರೆ.

ನಿಶ್ಚಿತ ದಿಕ್ಕಿನಲ್ಲಿ ಬಾಳೆ ಎಲೆಯ ಮೇಲೆ ಅಕ್ಕಿಯನ್ನು ಹಾಕಿ ಅದಕ್ಕೆ ಸ್ವಸ್ತಿಕದ ಚಿಹ್ನೆಯನ್ನು ಬಿಡಿಸಬೇಕು. ನಂತರ ಅದರ ಮೇಲೆ ನೀರು ತುಂಬಿದ ಕಲಶವನ್ನು ಇಟ್ಟು ಅದಕ್ಕೆ ನೀರು ಕುಂಕುಮ ಅರಿಶಿಣ ಮತ್ತು ಹೂವು-ಅಕ್ಷತೆಯನ್ನು ಹಾಕಿ ಆ ಕಲಶದಲ್ಲಿ ಗಂಗಾಮಾತೆಯನ್ನು ಆಹ್ವಾನಿಸಬೇಕು. ಕೆಲವರು ಪುಟ್ಟ ಹವಳ ಇಲ್ಲವೇ ಮುತ್ತಿನ ಆಭರಣವನ್ನು ಅದರಲ್ಲಿ ಹಾಕುತ್ತಾರೆ. ನಂತರ ಅದರಲ್ಲಿ ಮಾವಿನ ಇಲ್ಲವೇ ವೀಳ್ಯದ 5, 9 ಎಲೆಗಳನ್ನು ಒಳಮುಖವಾಗಿ ಜೋಡಿಸಿ ಅದರ ಮೇಲೆ ಐದೆಳೆಯ ದಾರವನ್ನು ಸುತ್ತಿದ ಸಿಪ್ಪೆಯ ತೆಂಗಿನಕಾಯಿಯನ್ನು ಕೂರಿಸಬೇಕು.

ಅದಕ್ಕೆ ಲಕ್ಷ್ಮೀ ದೇವಿಯ ಮುಖವಾಡವನ್ನು ಕೂಡ ಕೂರಿಸಬಹುದು. ದೇವಿಯ ಮುಂದೆ ಐದು ವಿಧದ ಹಣ್ಣುಗಳನ್ನು ಜೋಡಿಸಿದ ಬುಟ್ಟಿಯಲ್ಲಿ ಎಲೆ-ಅಡಿಕೆ ಮತ್ತು ಉಡಿ ಬಟ್ಟಲನ್ನು ಇಟ್ಟು ಅದರಲ್ಲಿ ಬೆಳ್ಳಿಯ ನಾಣ್ಯಗಳನ್ನು ಇಡುತ್ತಾರೆ. ವ್ರತವನ್ನು ಮಾಡುವ ಮುತ್ತೈದೆಯು ಗಣಪತಿ ಪೂಜೆಯಿಂದ ಆರಂಭಿಸಿ ಸಂಕಲ್ಪವನ್ನು ಮಾಡಿ ತಮ್ಮ ತಮ್ಮ ಅನುಕೂಲಕ್ಕೆ ತಕ್ಕಂತೆ ಪುರೋಹಿತರ ಮೂಲಕ ಅಥವಾ ತಾವೇ ಖುದ್ದಾಗಿ ಶಾಸ್ತ್ರೋಕ್ತವಾಗಿ ಪೂಜೆಯನ್ನು ಮಾಡಬೇಕು. ಪೂಜೆಯ ಸಂದರ್ಭದಲ್ಲಿ ಅರಿಶಿಣದ ದಾರವನ್ನು ಒಂಬತ್ತು ಇಲ್ಲವೇ 12 ಗಂಟನ್ನು ತೆಗೆದು ಬಲಗೈಗೆ ಕಟ್ಟಿಕೊಳ್ಳಬೇಕು.

5ರಿಂದ 9 ವಿಧದ ಸಿಹಿ ತಿಂಡಿಗಳನ್ನು ನೈವೇದ್ಯಕ್ಕೆ ಮಾಡಬೇಕು. ಎಲ್ಲ ಪೂಜಾ ವಿಧಿಗಳ ನಂತರ ವರಮಹಾಲಕ್ಷ್ಮೀ ವ್ರತ ಮಹಾತ್ಮೆಯ ಚರಿತ್ರೆಯನ್ನು ಓದಬೇಕು. ಮಂಗಳಾರತಿಯನ್ನು ಮಾಡಿ ದೇವಿಗೆ ಕಡಲೆ ಬೇಳೆ ಪಾಯಸ (ಹಯಗ್ರೀವ), ಹೆಸರು ಬೇಳೆ ಪಾಯಸ, ಬೇಳೆಯ ಹೋಳಿಗೆ, ಕೋಸಂಬರಿ, ಚಿತ್ರಾನ್ನ, ಪುಳಿಯೋಗರೆ ಹುಳಿಯನ್ನ ಹೀಗೆ ಹತ್ತು ಹಲವು ವಿಧದ ನೈವೇದ್ಯಗಳನ್ನು ಮಾಡಿ ಕಾಯಿ ಒಡೆದು ಅರ್ಪಿಸಬೇಕು.

ಉಡಿ ತುಂಬಿಸಿಕೊಂಡ ಹೆಣ್ಣುಮಕ್ಕಳು ಕೂಡ ದೇವಿಗೆ ಮಂಗಳಾರತಿ, ದೇವರ ಹಾಡುಗಳನ್ನು ಹಾಡಿ ದೇವಿಗೆ ಆರತಿಯನ್ನು ಬೆಳಗುತ್ತಾರೆ. ವ್ರತದ ನಿಯಮವಿರುವ ಮನೆಯಲ್ಲಿ ಮುತ್ತೈದೆಯರು ಮದುವೆಯಾದ ಮೊದಲು 9 ವರ್ಷಗಳು ಈ ವ್ರತವನ್ನು ಮಾಡಿ 9ನೇ ವರ್ಷಕ್ಕೆ ಈ ವ್ರತದ ಉದ್ಯಾಪನೆ ಮಾಡಿ ಮುತ್ತೈದೆಯರಿಗೆ ಬಾಗಿನ ನೀಡಿ ಈ ವ್ರತವನ್ನು ಸಮಾಪ್ತಗೊಳಿಸುತ್ತಾರೆ. ಮತ್ತೆ ಕೆಲವರು ಪ್ರತಿ ವರ್ಷವೂ ವ್ರತವನ್ನು ಆಚರಿಸುತ್ತಾರೆ. ಒಟ್ಟಿನಲ್ಲಿ ಇದು ಮಹಿಳೆಯರು ಭಕ್ತಿಯ ಜೊತೆಗೆ ಉಟ್ಟು ತೊಟ್ಟು ಸಂಭ್ರಮಿಸುವ ಹಬ್ಬ. ಹಾಗೆಂದು ವರಮಹಾಲಕ್ಷ್ಮೀ ಹಬ್ಬವನ್ನು ಅದ್ದೂರಿಯಾಗಿ ಮಾತ್ರವೇ ಮಾಡಬೇಕೆಂಬುದು ತಪ್ಪು ಕಲ್ಪನೆಯಷ್ಟೇ. ದೇವಿ ಸರ್ವ ಸಂತೃಪ್ತಳು. ಮನೆಯಲ್ಲಿ ಏನೂ ಇರದಿದ್ದರೂ ಪರವಾಗಿಲ್ಲ. ಪುಟ್ಟ ಬಾಳೆಯ ಎಲೆಯ ಮೇಲೆ ಸ್ವಲ್ಪವೇ ಅಕ್ಕಿಯನ್ನು ಹಾಕಿ ಚೆನ್ನಾಗಿ ತೇದ ಗಂಧದಲ್ಲಿ ಅರಿಶಿಣದ ಹುಡಿಯನ್ನು ಕಲಸಿ ಅದರಿಂದ ಪುಟ್ಟಗೌರಿಯ ಮುಖವನ್ನು ಮಾಡಿ ತಮ್ಮ ಶಕ್ತ್ಯಾನುಸಾರ ಪೂಜೆ ಮಾಡಿದರೆ ಸಾಕು. ಸಾಲ ಮಾಡಿಯಾದರೂ ವರಮಹಾಲಕ್ಷ್ಮೀ ವ್ರತವನ್ನು ಮಾಡುತ್ತೇನೆ ಎನ್ನುವುದಾದರೆ ಅದನ್ನು ಬಹುಶಃ ದೇವಿಯು ಕೂಡ ಒಪ್ಪಳು.

ಎಷ್ಟೇ ಆಗಲಿ ಹಿಡಿ ಅವಲಕ್ಕಿಗೆ ತೃಪ್ತನಾದ ಮಹಾವಿಷ್ಣುವಿನ ಪತ್ನಿಯಲ್ಲವೇ ಆಕೆ! ಎಲ್ಲರಿಗೂ ವರಮಹಾಲಕ್ಷ್ಮೀಯು ಆಯುರಾರೋಗ್ಯ, ಸುಖ, ನೆಮ್ಮದಿ, ಸಂತಸಗಳನ್ನು ದಯಪಾಲಿಸಲಿ.

-ವೀಣಾ ಹೇಮಂತ್‌ಗೌಡ ಪಾಟೀಲ್.
ಮುಂಡರಗಿ, ಗದಗ.

## ಯುದ್ಧ ವಿರೋಧಿ ಕವಿಗೋಷ್ಠಿಯಲ್ಲಿ ಪ್ರೊ. ಮಾಲತಿ ಪಟ್ಟಣಶೆಟ್ಟಿ

# ಯುದ್ಧದ ಕಿಡಿಗಳಿಂದ ಪ್ರಳಯವೇ ಆದೀತು



ಕವಿಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಕಾರಿ ಸಮಿತಿ ಸದಸ್ಯ ಪ್ರೊ. ಶಶಿಧರ ತೋಡಕರ, ಸಾಮ್ರಾಟ ಅಶೋಕ ಕಳಿಂಗ ಯುದ್ಧದ ಮಾರಣ ಹೋಮದಿಂದ ಕಂಗೆಟ್ಟು ತನ್ನ ಸಾಮ್ರಾಜ್ಯ ಹಾಳಾದರಾಗಲಿ ಎಂದು ಸದ್ಭಾವದಿಂದ ಶಾಂತಿಯ ಸಂದೇಶಕನಾಗಿ ಬದಲಾಗಿದ್ದು ಪ್ರೇರಣೆಯಾಗಬೇಕು. ಕನ್ನಡದ ವಿವೇಕ ಕೂಡ ಹಿಂಸೆಯನ್ನು ಒಪ್ಪಿಕೊಂಡಿಲ್ಲ. ಸಾವಿರ ವರ್ಷಗಳ ಹಿಂದೆಯೇ ಯುದ್ಧ ಬೇಡ ಎಂದು ಆದಿಕವಿ ರನ್ನ ವಿವರಿಸಿದ್ದಾರೆ ಎಂದರಲ್ಲದೇ, ಈ ಯುದ್ಧ ಸಂದರ್ಭಗಳಿಗೆ ಕೈಗನ್ನಡಿಯಾದ ಸವಿತಾ ನಾಗಭೂಷಣ ಅವರ 'ಬಲಾಢ್ಯರು' ಕವನವನ್ನು ವಾಚಿಸಿದರು.

■ **ವಿಜಯಸಾಕ್ಷಿ ಸುದ್ದಿ, ಧಾರವಾಡ**


ಜಗತ್ತಿನ ಬಲಿಷ್ಠ ಶಸ್ತ್ರಗಳ ವ್ಯಾಪಾರಿಯೊಬ್ಬನ ಮಧ್ಯಸ್ಥಿಕೆ ವಿವಿಧ ದೇಶಗಳ ಮಧ್ಯೆ ನಡೆಯುವ ಯುದ್ಧಗಳನ್ನು ತಡೆಯಲು ಸಾಧ್ಯವೇ? ಅಮೇರಿಕ ಅಧ್ಯಕ್ಷ ಟ್ರಂಪ್ ನಮ್ಮುಂದಿರುವ ಉದಾಹರಣೆ ಅಲ್ಲವೇ? ಯುದ್ಧ ಸಂದರ್ಭದಲ್ಲಿ ಮಧ್ಯಸ್ಥಿಕೆ ವಹಿಸುವವನು ನಿಸ್ವಾರ್ಥಿ, ಮಾನವ ಜನಾಂಗದ ಶಾಂತಿ ಬಯಸುವವನಾಗಿರಬೇಕು. ವಿಶ್ವ ಸಂಸ್ಥೆ ಸರ್ವನಾಶಕ ಯುದ್ಧಗಳನ್ನು ತಡೆಯುವ ಶಕ್ತಿದಾಯಕ ನೀತಿಯನ್ನು ರೂಪಿಸಿಕೊಳ್ಳಬೇಕು. ಯುದ್ಧದ ಕಿಡಿಗಳು ಬೆಂಕಿಯಾಗಿ, ದಳ್ಳುರಿಯಾಗಿ ಒಂದು ದಿನ ಪ್ರಳಯವೇ ಆಗಬಹುದು. ಜನತೆ ಶಾಂತಿಯ ಹಡಗನ್ನು ಕಾಯಲು ಸಂಘಟಿತ ಪ್ರಯತ್ನ ಮಾಡಲೇಬೇಕು. ಆಳುವ ವ್ಯವಸ್ಥೆಯ ಕುತಂತ್ರಗಳ ವಿರುದ್ಧ ಪ್ರತಿರೋಧ ಇರಲೇಬೇಕು ಎಂದು ಹಿರಿಯ ಸಾಹಿತಿ ಪ್ರೊ. ಮಾಲತಿ ಪಟ್ಟಣಶೆಟ್ಟಿ ಹೇಳಿದರು.

ಧಾರವಾಡದ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಸಮುದಾಯ, ಧಾರವಾಡ 'ಸಮುದಾಯ-50' ಅಂಗವಾಗಿ ಏರ್ಪಡಿಸಿದ್ದ 'ಯುದ್ಧ ತಂತ್ರ ಅಳಿಯಲಿ, ಶಾಂತಿ ಮಂತ್ರ ಮೊಳಗಲಿ' ಘೋಷಣೆಯಡಿ ನಡೆದ ಯುದ್ಧ ವಿರೋಧಿ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕವಿಗಳಾದ ಮಹಾಂತಪ್ಪ ನಂದೂರ, ಡಾ. ಮೈತ್ರೇಯಿ ಗದಿಗೆಪ್ಪಗೌಡರ, ನಿರ್ಮಲಾ ಶೆಟ್ಟರ, ಡಾ. ಲಿಂಗರಾಜ ರಾಮಾಪೂರ, ರಾಮಚಂದ್ರ ಕುಲಕರ್ಣಿ, ರಂಜಾನ ಕಿಲ್ಲೇದಾರ, ಸಿ.ಎಂ. ಮುನಿಸ್ವಾಮಿ, ಗಾಯತ್ರಿ ಬಡಿಗೇರ, ಎಸ್.ಎಸ್. ಚಿಕ್ಕಮಠ, ವಿರೂಪಾಕ್ಷ ಕಟ್ಟಿಮನಿ, ಲಲಿತಾ ಚಾಕಲಬ್ಬಿ, ಸುಹಾಸಿನಿ ಕೊಕಡೊಳ್ಳಿ, ಮಲ್ಲಮ್ಮ ಯಾಟಗಲ್, ಜೋಸೆಫ್ ಮಲ್ಲಾಡಿ, ಡಾ. ಯೋಗೇಶ ಪಾಟೀಲ, ಸಿ.ಎಂ. ಚನ್ನಬಸಪ್ಪ ಅವರುಗಳು ಜನರ ಗಮನ ಸೆಳೆದ ಶಾಂತಿ ಸಂದೇಶ ಸಾರುವ ತಮ್ಮ ಸ್ವರಚಿತ ಕವನಗಳನ್ನು ಪ್ರಸ್ತುತಪಡಿಸಿದರು.

ಗೌರವಾಧ್ಯಕ್ಷ ಡಾ. ಶಿವಾನಂದ ಶೆಟ್ಟರ ಅವರು ಪ್ರಸ್ತಾವಿಕವಾಗಿ ಮಾತನಾಡಿ, ಆಗಸ್ಟ್ 6 ಹಿರೋಶಿಮಾ-ನಾಗಾಸಾಕಿಯ ಮೇಲೆ ಸರ್ವನಾಶಕ ಬಾಂಬ್ ಹಾಕಿ ಜಗತ್ತನ್ನೆ ತಲ್ಲಣಗೊಳಿಸಿದ ಈ ದಿನ ಶಾಂತಿ ಸಾರುವ ದಿನ ಎಂದರು. ಅಧ್ಯಕ್ಷ ಬಿ.ಐ. ಈಳಿಗೇರ ಮಾತನಾಡಿದರು. ಸಮುದಾಯ ಕಲಾ ತಂಡದವರು ಯುದ್ಧ ವಿರೋಧಿ ಗೀತೆಗಳನ್ನು ಪ್ರಸ್ತುತಪಡಿಸಿದರು. ಕಾರ್ಯಕ್ರಮದ ಪ್ರಾರಂಭದಲ್ಲಿ ಜಗತ್ತಿನ ಯುದ್ಧ, ಭಯೋತ್ಪಾದಕರ ದಾಳಿಯಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ವೀರಣ್ಣ ಹೊಸಮನಿ ನಿರೂಪಿಸಿದರು. ರಂಜಾನ್ ಕಿಲ್ಲೇದಾರ ಕವಿಗೋಷ್ಠಿ ಸಂಯೋಜಿಸಿದರು. ಜೋಸೆಫ್ ಮಲ್ಲಾಡಿ ವಂದಿಸಿದರು. ಸೋಮಲಿಂಗ ಉಳ್ಳಿಗೇರಿ, ಹೇಮಾ ಪಟ್ಟಣಶೆಟ್ಟಿ, ಎ.ಎಂ. ಖಾನ್, ಮಹೇಶ ಪತ್ತಾರ, ಈರಣ್ಣ ಐನಾಪೂರ, ಗಂಗಾಧರ ಗಾಡದ ಮುಂತಾದವರು ಉಪಸ್ಥಿತರಿದ್ದರು.

# ಮತಗಳ್ಳತನ: ಇಂದು ಬೆಂಗಳೂರಿನಲ್ಲಿ ರಾಹುಲ್ ಗಾಂಧಿ ಪ್ರತಿಭಟನೆ, 6 ಸಾವಿರ ಪೊಲೀಸರಿಂದ ಬಂದೋಬಸ್ತ್!



■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಕರ್ನಾಟಕದಲ್ಲಿ ಮತಗಳ್ಳತನ ನಡೆದಿದೆ ಎಂದು ಆರೋಪಿಸಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಫ್ರೀಡಂ ಪಾರ್ಕಿನಲ್ಲಿ ಇಂದು ಕಾಂಗ್ರೆಸ್ ಪ್ರತಿಭಟನೆ ಹಮ್ಮಿಕೊಂಡಿದೆ.

ಪ್ರತಿಭಟನೆಗೆ 'ವೋಟ್ ಅಧಿಕಾರ್ ರ‍್ಯಾಲಿ ಎಂದು ಕಾಂಗ್ರೆಸ್ ಪಕ್ಷ ಹೆಸರಿಟ್ಟಿದೆ. ಈ ರ‍್ಯಾಲಿಯಲ್ಲಿ ರಾಹುಲ್ ಗಾಂಧಿ ಜೊತೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ರಾಜ್ಯದ ಕ್ಯಾಬಿನೆಟ್ ಸಚಿವರೆಲ್ಲಾ ಭಾಗವಹಿಸುತ್ತಿದ್ದಾರೆ.

ಫ್ರೀಡಂ ಪಾರ್ಕ್ ನಲ್ಲಿ ರಾಷ್ಟ್ರ ಮಟ್ಟದ ನಾಯಕರಿಂದ ಹಿಡಿದು ಗ್ರಾಮ ಪಂಚಾಯಿತಿವರೆಗಿನ ಎಲ್ಲ ನಾಯಕರು ಭಾಗವಹಿಸುವುದರಿಂದ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗುತ್ತಿದೆ. ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೂ ಕಾಂಗ್ರೆಸ್ ಪಕ್ಷದ ರ‍್ಯಾಯಾಲಿ ನಡೆಯಲಿದೆ.

ಬೆಂಗಳೂರು ಪೊಲೀಸರು, ಫ್ರೀಡಂ ಪಾರ್ಕ್ ಸುತ್ತಮುತ್ತಲ ಪ್ರದೇಶವನ್ನು ಭದ್ರತೆಯ ಉದ್ದೇಶದಿಂದ 15 ಸೆಕ್ಟರ್ ಗಳಾಗಿ ವಿಂಗಡಣೆ ಮಾಡಿಕೊಂಡಿದ್ದಾರೆ. ಪ್ರತಿ ಸೆಕ್ಟರ್ ಗೆ ಓರ್ವ ಡಿಸಿಪಿ ನೇತೃತ್ವದಲ್ಲಿ ಭದ್ರತೆ ನೀಡಲಾಗುತ್ತಿದೆ.

ಇಂದು ರಾಹುಲ್ ಗಾಂಧಿ ಕಾರ್ಯಕ್ರಮಕ್ಕಾಗಿ ಬೆಂಗಳೂರು ಪೊಲೀಸರು ತಾತ್ಕಾಲಿಕ ಕಂಟ್ರೋಲ್ ರೂಂ ತೆಗೆದು ಭದ್ರತಾ ಕಾರ್ಯ ನಿರ್ವಹಿಸುವರು. 6000 ಪೊಲೀಸರನ್ನ ಭದ್ರತೆಗಾಗಿ ನಿಯೋಜನೆ ಮಾಡಲಾಗುತ್ತಿದೆ. ಪ್ರತಿಭಟನಾನಿರತರ ನಡುವೆ 500 ಪೊಲೀಸರನ್ನು ನಿಯೋಜನೆ ಮಾಡಲಾಗುತ್ತಿದೆ.

## ಪ್ರಾಥಮಿಕ ಶಾಲಾ ವಿಭಾಗದ ಚಿಗಟೇರಿ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಶಾಸಕಿ ಲತಾ ಮಲ್ಲಿಕಾರ್ಜುನ

# ಮಕ್ಕಳಲ್ಲಿ ಕ್ರೀಡೆಯಲ್ಲಿನ ಆಸಕ್ತಿ ಕಡಿಮೆಯಾಗಿದೆ



ಟಿಎಪಿಎಂಸಿ ಅಧ್ಯಕ್ಷ ಬಿ.ಕೆ. ಪ್ರಕಾಶ್ ಮಾತನಾಡಿ, ನಿಲವಂಜಿ ಗ್ರಾಮದಲ್ಲಿ ಶಾಲೆಗೆ ಜಾಗದ ಕೊರತೆ ಇತ್ತು. ಆಗ ಮಾಜಿ ಶಾಸಕ ಎಂ.ಪಿ. ರವೀಂದ್ರರು ತಮ್ಮ ಅಧಿಕಾರಾವಧಿಯಲ್ಲಿ ಅವರ ತಂದೆ-ತಾಯಿಗಳ ಹೆಸರಿನಲ್ಲಿ ಶಾಲೆ ನಿರ್ಮಿಸಿ ಗ್ರಾಮದ ಮಕ್ಕಳ ಶಿಕ್ಷಣಕ್ಕೆ ಸಹಕರಿಸಿದರು. ಕ್ರೀಡೆಗೆ ಅದರದೇ ಆದ ಪ್ರಾಧಾನ್ಯತೆ ಇದೆ. ಗ್ರಾಮೀಣ ಪ್ರದೇಶಗಳಿಂದ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಹೆಸರು ಮಾಡಿದ ಸಾಕಷ್ಟು ಕ್ರೀಡಾಪಟುಗಳನ್ನು ಕಾಣುತ್ತಿದ್ದೇವೆ. ಹಾಗಾಗಿ ಮಕ್ಕಳಿಗೆ ಕ್ರೀಡೆಯ ಬಗ್ಗೆ ಆಸಕ್ತಿ ಮೂಡುವಂತಹ ವಾತಾವರಣ ನಿರ್ಮಿಸಬೇಕು ಎಂದರು.

■ **ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ಮನಸ್ಸಿಗೆ ಮುದ ನೀಡಿದಂತಾಗುತ್ತದೆ ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ತಿಳಿಸಿದರು.

ತಾಲೂಕಿನ ನಿಲವಂಜಿ ಗ್ರಾಮದ ರುದ್ರಾಂಬ ಎಂ.ಪಿ ಪ್ರಕಾಶ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಪ್ರಾಥಮಿಕ ಶಾಲಾ ವಿಭಾಗದ ಚಿಗಟೇರಿ ವಲಯ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆ ಗರಡಿ ಮನೆಗಳಲ್ಲಿ ಯುವಕರು ಕಸರತ್ತು ನಡೆಸುತ್ತಾ ಗುಂಡು ಎತ್ತುವುದು, ಬಂಡಿಯ ಗಾಲಿಗಳನ್ನು ಎತ್ತುವುದು ಮತ್ತು ದೇಸೀ ಕ್ರೀಡೆಗಳಾದ ಕಬಡ್ಡಿ, ಖೋಖೋ ಆಡುತ್ತಾ ದೇಹ ದಂಡಿಸಿ ಆರೋಗ್ಯಯುತ ಜೀವನವನ್ನು ಸಾಗಿಸುತ್ತಿದ್ದರು. ಇಂದಿನ ಮಕ್ಕಳಲ್ಲಿ ಆಟಗಳ ಬಗೆಗಿನ ಆಸಕ್ತಿಯು ಕಡಿಮೆಯಾಗಿದ್ದು, ಇಂತಹ ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ದಿನನಿತ್ಯದ ಬದುಕಿನಲ್ಲಿ ಸದಾ ಲವಲವಿಕೆಯಿಂದ ಇರಲು ಸಹಕಾರಿಯಾಗುತ್ತದೆ ಎಂದರು.

ಬಿಇಓ ಎಚ್. ಲೇಪಾಕ್ಷಪ್ಪ ಮಾತನಾಡಿ, ಮಕ್ಕಳ ಸರ್ವತೋಮುಖ ಅಭಿವೃದ್ಧಿಯಾಗಲು ಶಿಕ್ಷಣದ ಜೊತೆಗೆ ಕ್ರೀಡಾಸಕ್ತಿಯೂ ಅತ್ಯಮೂಲ್ಯವಾದದ್ದು. ಹುಟ್ಟಿನಿಂದಲೇ ತಮ್ಮ ಮಕ್ಕಳು ಯಾವ ಕ್ಷೇತ್ರದಲ್ಲಿ ಅಭಿರುಚಿ ಹೊಂದಿದ್ದಾರೆ ಎನ್ನುವುದನ್ನು ಪೋಷಕರು ಅರಿತು ಅವರಿಗೆ ಆಸಕ್ತಿ ಇರುವ ಕಡೆ ಶಿಕ್ಷಣ ನೀಡಬೇಕು ಎಂದರು.

ಟಿಪಿಇಓ ಕೆ. ಷಣ್ಮುಖಪ್ಪ, ಗ್ರಾ.ಪಂ ಅಧ್ಯಕ್ಷ ತುಕೇಶಪ್ಪ ಗೌಡ, ಎಸ್ಡಿಎಂಸಿ ಅಧ್ಯಕ್ಷೆ ಎಂ. ಸರೋಜ, ಗ್ರಾ.ಪಂ ಸದಸ್ಯ ಬಸವರಾಜ್, ಬಣಕಾರ ಶಿವಪುತ್ರ, ಬಿಆರ್‌ಪಿ ವಾಗೇಶ್, ಸಿಆರ್‌ಪಿ ಶ್ರೀಕಾಂತ, ಮುಖ್ಯ ಶಿಕ್ಷಕಿ ಪ್ರೇಮ, ಅಶೋಕ್, ಶಿಕ್ಷಕರಾದ ಎಸ್. ಷರೀಫ್, ಮಂಜುನಾಥ ಪೂಜಾರಿ, ಉಮೇಶ್ ಗೌಡ, ಅನಿತಮ್ಮ, ಕರಿಬಸಪ್ಪ ಹಾಗೂ ಗ್ರಾಮದ ಹಳೆಯ ವಿದ್ಯಾರ್ಥಿಗಳು ಮತ್ತು 13 ಶಾಲೆಯ ಶಿಕ್ಷಕರು ಪಾಲ್ಗೊಂಡಿದ್ದರು.

### ಸ್ವಾತಂತ್ರ್ಯ ದಿನಾಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ

# ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಆಚರಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಆಗಸ್ಟ್ 15ರಂದು ಜರುಗುವ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಜರುಗಲು ಸಂಬಂಧಿತ ಇಲಾಖಾಧಿಕಾರಿಗಳು ಪೂರ್ವತಯಾರಿ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಸ್ವಾತಂತ್ರ್ಯ ದಿನಾಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರು ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಕ್ರೀಡಾಂಗಣದಲ್ಲಿ ನೆರೆದ ಸಾರ್ವಜನಿಕರಿಗೆ ಸ್ವಾತಂತ್ರ್ಯೋತ್ಸವದ ಸಂದೇಶ ನೀಡುವರು. ಶಾಲಾ ಮಕ್ಕಳು ಜಿಲ್ಲಾ ಕ್ರೀಡಾಂಗಣದಲ್ಲಿ ಕಾರ್ಯಕ್ರಮದ ಮುಂಚೆಯೇ ಆಗಮಿಸಿ ನಿಗದಿತ ಸ್ಥಳದಲ್ಲಿ ಕುಳಿತುಕೊಂಡು ಕಾರ್ಯಕ್ರಮದ ಮುಗಿಯುವವರೆಗೆ ಹಾಜರಿರುವಂತೆ ಆಯಾ ಶಾಲೆಯ ಶಿಕ್ಷಕರು ಹಾಗೂ ನಿಯೋಜಿಸಿದ ಅಧಿಕಾರಿಗಳು ನಿಗಾ ವಹಿಸಬೇಕು.

ಬೆಳಿಗ್ಗೆ 8.30ರೊಳಗಾಗಿ ವಿವಿಧ ಇಲಾಖಾ ಅಧಿಕಾರಿಗಳು ತಮ್ಮ ಕಚೇರಿಯಲ್ಲಿ ಧ್ವಜಾರೋಹಣ ನೆರವೇರಿಸಿ ಕ್ರೀಡಾಂಗಣದಲ್ಲಿ ತಮ್ಮ ಇಲಾಖಾ ಸಿಬ್ಬಂದಿಗಳೊಂದಿಗೆ ಹಾಜರಿರಬೇಕು. ಸಾಂಸ್ಕೃತಿಕ ಕಾರ್ಯಕ್ರಮಗಳು, ಸನ್ಮಾನ ಸಮಾರಂಭಗಳು ನಡೆಯುವಾಗ ಯಾವುದೇ ಗೊಂದಲಗಳಾಗದಂತೆ ಅಚ್ಚುಕಟ್ಟಾಗಿ ಜರುಗುವಂತೆ ಕ್ರಮ ವಹಿಸಬೇಕು. ತುರ್ತು ಪರಿಸ್ಥಿತಿಯಲ್ಲಿ ಅಂಬ್ಯುಲನ್ಸ್ ಲಭ್ಯವಿರುವಂತೆ ನೋಡಿಕೊಳ್ಳಬೇಕು ಎಂದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ವೇದಿಕೆಯಲ್ಲಿ ಶಿಷ್ಟಾಚಾರದಂತೆ ಕಾರ್ಯಕ್ರಮ ನಿರ್ವಹಣೆಯಾಗಬೇಕು. ನೆರೆದ ಸಾರ್ವಜನಿಕರೆಲ್ಲರಿಗೂ ಸಚಿವರ ಸಂದೇಶ ಕೇಳಿಸುವಂತೆ ಧ್ವನಿವರ್ಧಕದ ವ್ಯವಸ್ಥೆ ಮಾಡಬೇಕು. ಮಕ್ಕಳಿಗೆ ಅಲ್ಲಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಪ್ರತಿಯೊಂದು ಕಾರ್ಯಕ್ರಮ ನಿಗದಿಪಡಿಸಿದ ಸಮಯಕ್ಕೆ ಜರುಗುವಂತೆ ನಿಗಾ ವಹಿಸಬೇಕು ಎಂದು ತಿಳಿಸಿದರು.



ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಮಾತನಾಡಿ, ಆ. 15ಕ್ಕೂ ಮೊದಲು ಮೂರು ದಿನ ಮುಂಚಿತವಾಗಿಯೇ ನಗರಸಭೆಯ ಅಧಿಕಾರಿಗಳು ನಗರದ ಪ್ರಮುಖ ವೃತ್ತಗಳ ಸ್ವಚ್ಛತೆಗೆ ಹಾಗೂ ಜಿಲ್ಲಾ ಕ್ರೀಡಾಂಗಣದ ಸ್ವಚ್ಛತೆಗೆ ಆದ್ಯತೆ ವಹಿಸಿ ಶುಚಿಗೊಳಿಸಬೇಕು. ಪ್ರಮುಖ ವೃತ್ತಗಳಲ್ಲಿ ಮುಂಚಿತಾಗಿಯೇ ದೀಪಾಲಂಕಾರ ಮಾಡಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೊಟೂರ, ಕೌಶಲ್ಯಾಭಿವೃದ್ಧಿ ಅಧಿಕಾರಿ ಬಸವರಾಜ ಮಲ್ಲೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮತ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ, ಕ್ರೀಡಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ, ಜಿಲ್ಲಾ ಉಪ ಸಮನ್ವಯಾಧಿಕಾರಿ ಎಮ್.ಎಚ್. ಕಂಬ್ಳಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮಹಬೂಬ ತುಂಬರಮಟ್ಟಿ, ಶಾಲಾ ಶಿಕ್ಷಕ ವೃಂದ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮಕ್ಕೆ ಆಗಮಿಸಿದ ಶಾಲಾ ಮಕ್ಕಳು ಅನವಶ್ಯಕವಾಗಿ ಕ್ರೀಡಾಂಗಣದ ಹೊರ ಆವರಣದಲ್ಲಿ ಮಾರಾಟ ಮಾಡುವ ಕುರುಕಲು ತಿಂಡಿಯನ್ನು ಸೇವಿಸದಂತೆ ಶಾಲಾ ಶಿಕ್ಷಕರು ನಿಗಾ ವಹಿಸಬೇಕು. ಕಾರ್ಯಕ್ರಮ ಮುಗಿಯುವವರೆಗೆ ಶಾಲಾ ಮಕ್ಕಳು ಅಲ್ಲಿಯೇ ಕುಳಿತುಕೊಂಡು ನಂತರ ಶಾಂತಿಯುತವಾಗಿ ನಿರ್ಗಮಿಸುವಂತೆ ಕ್ರಮ ವಹಿಸಬೇಕು ಎಂದರು.

## ದಾಖಲೆ ಬರೆದ ಗೃಹ ಸಚಿವ ಅಮಿತ್ ಶಾ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಾರತದ ಇತಿಹಾಸದಲ್ಲಿ ಅತ್ಯಂತ ದೀರ್ಘಾವಧಿಯ ಗೃಹ ಸಚಿವರಾಗಿ ಹೊಸ ದಾಖಲೆಯನ್ನು ಸೃಷ್ಟಿಸಿದ್ದಾರೆ. ಅಮಿತ್ ಶಾ ಅವರಿಗೆ ಹೃದಯಪೂರ್ವಕ ಅಭಿನಂದನೆಗಳನ್ನು ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮಿತ್ ಶಾ ಮೇ 30, 2019ರಿಂದ ಭಾರತದ ಗೃಹ ಸಚಿವರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಗೋವಿಂದ ವಲ್ಲಭ ಪಂತ್ ಮತ್ತು ಲಾಲ್ ಕೃಷ್ಣಾ ಅಡ್ವಾಣಿ ಅವರ



ದಾಖಲೆಗಳನ್ನು ಹಿಂದಿಕ್ಕಿ ಅತಿ ಹೆಚ್ಚು ಕಾಲ ಗೃಹ ಸಚಿವರಾಗಿ ಸೇವೆ ಸಲ್ಲಿಸಿದ ಕೀರ್ತಿಗೆ ಪಾತ್ರರಾಗಲಿದ್ದಾರೆ. ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ಮತ್ತು ರಾಷ್ಟ್ರೀಯ ನಾಗರಿಕರ ನೋಂದಣಿ (ಎನ್‌ಆರ್‌ಸಿ) ಅನುಷ್ಠಾನ ಅವರ ಕೆಲವು ಗಮನಾರ್ಹ ಉಪಕ್ರಮಗಳಾಗಿವೆ.

ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡಿದ್ದ 370ನೇ ವಿಧಿಯನ್ನು ರದ್ದುಗೊಳಿಸುವಲ್ಲಿ ಶಾ ನಿರ್ಣಾಯಕ ಪಾತ್ರ ವಹಿಸಿದ್ದಾರೆ. ಅಮಿತ್ ಶಾ ಅವರ ನಾಯಕತ್ವದಲ್ಲಿ, ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ಚಟುವಟಿಕೆಗಳಲ್ಲಿ ಗಮನಾರ್ಹ ಇಳಿಕೆ ಮತ್ತು ಅಭಿವೃದ್ಧಿ ಯೋಜನೆಗಳಲ್ಲಿ ಹೆಚ್ಚಳ ಕಂಡುಬಂದಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿಗೆ ಶಿರಹಟ್ಟಿ ತಾಲೂಕಿನಲ್ಲಿ ನಡೆಯುತ್ತಿರುವ ಮಹರ್ಷಿ ಶ್ರೀ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ನವೇಭಾವನೂರ ಇಲ್ಲಿಗೆ 7 ನೇ ತರಗತಿಯಲ್ಲಿ ಖಾಲಿ ಇರುವ ಸ್ಥಾನಗಳಿಗೆ ಅರ್ಹ ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ, ಇತರೇ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಂದ ವಸತಿ ಶಾಲೆಗಳ ಪ್ರವೇಶಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರವೇಶ ಬಯಸುವ ವಿದ್ಯಾರ್ಥಿ / ವಿದ್ಯಾರ್ಥಿನಿಯರು ಕಚೇರಿ ಸಮಯದಲ್ಲಿ ಕಾರ್ಯಾಲಯದಿಂದ / ಆಶ್ರಮ ಶಾಲೆಯಿಂದ ಅರ್ಜಿಗಳನ್ನು ಪಡೆದುಕೊಂಡು ಸಂಬಂಧಿತ ದಾಖಲೆ ಲಗತ್ತಿಸಿ ಮುಖ್ಯೋಪಾಧ್ಯಾಯರಿಂದ ದೃಢೀಕರಿಸಿ ಸಹಾಯಕ ನಿರ್ದೇಶಕರ ಕಾರ್ಯಾಲಯದ, ಸಮಾಜ ಕಲ್ಯಾಣ ಇಲಾಖೆ, ಶಿರಹಟ್ಟಿ ಇಲ್ಲಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಆಗಸ್ಟ್ 20 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಶಿರಹಟ್ಟಿ ದೂರವಾಣಿ ಸಂಖ್ಯೆ 08487-295097 ಇಲ್ಲಿಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

## ಪುಟ್ಟರಾಜ ರೈತ ಸಂಘಕ್ಕೆ ಸೇರ್ಪಡೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಶ್ರೀ ಡಾ. ಪಂಡಿತ ಪುಟ್ಟರಾಜ ರೈತ ಸಂಘದ ಸದಸ್ಯರುಗಳಾಗಿ ಗದಗ ತಾಲೂಕಿನ ಅಸುಂಡಿ ಗ್ರಾಮದ ಫಕ್ಕೀರಯ್ಯ ಕಣವಿ, ರಾಜಶೇಖರ ಭೂಮಕ್ಕನವರ, ಅರವಿಂದರಡ್ಡಿ ಬ. ಹುಚ್ಚಣ್ಣವರ, ಲೀಲಾಧರ ರಾ.ಹುಚ್ಚಣ್ಣವರ, ಸೋಮರಡ್ಡಿ ವಾ.ಮಾಡೋಳ್ಳಿ, ಷಣ್ಮುಕಪ್ಪ ಹ.ವಗ್ಗನವರ, ಮಂಜುನಾಥ ಶಿ.ಗುಡದೂರ ಸಂಘದ ಕಾರ್ಯಾಲಯದಲ್ಲಿ ಸಂಘದ ತತ್ವ ಸಿದ್ಧಾಂತಗಳನ್ನು ಒಪ್ಪಿಕೊಂಡು ರಾಜ್ಯಾಧ್ಯಕ್ಷರಾದ ಎಂ.ಪಿ. ಮುಳಗುಂದ ಇವರಿಂದ ಸಂಘದ ಸದಸ್ಯತ್ವದ ಪತ್ರ ಪಡೆದು ಸಂಘಕ್ಕೆ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಅಶೋಕ ಎಂ.ಬಸೆಟ್ಟಿ, ಶಂಭು ಅಂಗಡಿ, ಮಹಾಂತೇಶ ಬಾವಿಮಠ ಸೇರಿದಂತೆ ಸಂಘದ ಸದಸ್ಯರು ಉಪಸ್ಥಿತರಿದ್ದರು.



ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ಸರ್ಕಾರಿ ಮತ್ತು ಅನುದಾನಿತ ಶಾಲಾ ಮುಖ್ಯಸ್ಥರೊಂದಿಗೆ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣಕ್ಕೆ ಶಾಲಾ ಮಕ್ಕಳನ್ನು ಕರೆತರುವಂತೆ ಸೂಕ್ತ ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರಡಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ಶಿಕ್ಷಣ ಇಲಾಖೆಯ ಉಪ ಸಮನ್ವಯಾಧಿಕಾರಿ ಎಂ.ಎಚ್. ಕಂಬ್ಳಿ ಸೇರಿದಂತೆ ಶಾಲಾ ಮುಖ್ಯಸ್ಥರು ಹಾಜರಿದ್ದರು.

## ವಿವಿಧ ನಿಗಮದಿಂದ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ/ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ/ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ/ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ 2025-26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ನಿರುದ್ಯೋಗ ಯುವಕ/ಯುವತಿಯರಿಗೆ ಆನ್‌ಲೈನ್ ಮೂಲಕ ಈ ಕೆಳಕಂಡ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ನೇರಸಾಲ ಯೋಜನೆಗಳು ನೇರ ಸಾಲ ಯೋಜನೆ, ಕಿರು ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು ಸಹಾಯಧನ ಹಾಗೂ ನೇರ ಸಾಲ ಮಂಜೂರು ಮಾಡಲಾಗುತ್ತದೆ.

**ಕುರಿಸಾಕಾಣಿಕೆ ಯೋಜನೆ**

ಕುರಿ ಸಾಕಾಣಿಕೆ ಉದ್ದೇಶಕ್ಕೆ ನಿಗಮದಿಂದ ಸಹಾಯಧನ ಮತ್ತು ನೇರ ಸಾಲ ಮಂಜೂರು ಮಾಡಲಾಗುತ್ತದೆ. ಘಟಕ ವೆಚ್ಚರೂ. 1.00 ಲಕ್ಷ ಸಹಾಯಧನ ರೂ. 50,000/-ಸಾಲ ರೂ. 50,000/- (ಶೆ. 4% ರಷ್ಟು ಬಡ್ಡಿದರ) ಉದ್ಯಮಶೀಲತಾ ಅಭಿವೃದ್ಧಿ ಯೋಜನೆ (ಬ್ಯಾಂಕ್‌ಗಳ ಸಹಯೋಗದೊಂದಿಗೆ) ಸ್ವಾವಲಂಬಿ ಸಾರಥಿ : ಸರಕುವಾಹನ/ಟ್ಯಾಕ್ಸಿ (ಹಳದಿ ಬೋರ್ಡ್) ಖರೀದಿಸುವ ಉದ್ದೇಶಕ್ಕೆ ಘಟಕ ವೆಚ್ಚದ ಶೇ. 75% ರಷ್ಟು ಅಥವಾ ಗರಿಷ್ಠ ರೂ. 4.00 ಲಕ್ಷಗಳ ಸಹಾಯಧನ

**ಫಾಸ್ಟ ಫುಡ್ ಟ್ರಕ್/ ಟ್ರೇಲರ್/ ಮೊಬೈಲ್ ಕಿಚನ್ ಫುಡ್ಕಿಯೋಸ್ಕ್** : ಫುಡ್ ಕಾರ್ಟ್ ವಾಹನಗಳ ಉದ್ದೇಶದಡಿ ಘಟಕ ವೆಚ್ಚ ಶೇ. 75% ರಷ್ಟು ಅಥವಾ ಗರಿಷ್ಠ ರೂ. 4.00 ಲಕ್ಷಗಳ ಸಹಾಯಧನ

**ಹೈನುಗಾರಿಕೆ** : ಹೈನುಗಾರಿಕೆ ಕೈಗೊಳ್ಳಲು ಎರಡು ಎಮ್ಮೆ/ ಹಸುಗಳಿಗೆ ಘಟಕ ವೆಚ್ಚದ ಶೇ. 50% ರಷ್ಟು ಅಥವಾ ಗರಿಷ್ಠ ರೂ. 1.25 ಲಕ್ಷಗಳ ಸಹಾಯಧನ

**ಇತರೆ ಉದ್ದೇಶ** : ವ್ಯಾಪಾರ ಮತ್ತು ಇತರೆ ಉದ್ದೇಶಗಳಿಗೆ ಘಟಕ ವೆಚ್ಚ ಶೇ 70% ರಷ್ಟು ಅಥವಾ ಗರಿಷ್ಠ ರೂ. 2.00 ಲಕ್ಷ ಸಹಾಯಧನ

**ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ** : ಮಹಿಳಾ ಸ್ವ ಸಹಾಯ ಸಂಘಗಳಿಗೆ (ಕನಿಷ್ಠ 10 ಸದಸ್ಯರು) ಕಿರು ಆರ್ಥಿಕ ಚಟುವಟಿಕೆಗಳಿಗೆ ಸಾಲ ಮತ್ತು ಸಹಾಯಧನ ಸೌಲಭ್ಯ ನೀಡಲಾಗುವುದು. ಘಟಕ ವೆಚ್ಚ ರೂ. 5.00 ಲಕ್ಷ ಸಹಾಯಧನ ರೂ. 2.50 ಲಕ್ಷ ಸಾಲ ರೂ. 2.50ಲಕ್ಷ (ಶೇ. 4% ರಷ್ಟು ಬಡ್ಡಿದರ)

**ಭೂ ಒಡೆತನ ಯೋಜನೆ** : ಭೂರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಈ ಕೆಳಕಂಡ ಘಟಕ ವೆಚ್ಚದಲ್ಲಿ ಕೃಷಿ ಜಮೀನು ಖರೀದಿಸಿ ನೀಡಲಾಗುವುದು. ಘಟಕ ವೆಚ್ಚ. ರೂ. 20.00 ಲಕ್ಷ ಸಹಾಯಧನ ಶೇ. 50% ಸಾಲ ಶೇ. 50% (ಶೇಕಡ 4% ರ ಬಡ್ಡಿದರ)

**ಗಂಗಾ ಕಲ್ಯಾಣ ಯೋಜನೆ** : 1.20 ಎಕರೆಯಿಂದ 5.00 ಎಕರೆ ಜಮೀನು ಹೊಂದಿರುವ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಕೊಳವೆ ಬಾವಿ ಕೊರೆದು ಪಂಪಸೆಟ್ ಅಳವಡಿಸಿ ವಿದ್ಯುದ್ಧೀಕರಣಗೊಳಿಸಿ ನೀರಾವರಿ ಸೌಲಭ್ಯ ಒದಗಿಸಿ ಕೊಡಲಾಗುವುದು. ಘಟಕ ವೆಚ್ಚ ರೂ. 3.75 ಲಕ್ಷ ಇದರಲ್ಲಿ ರೂ. 50,000/- ಸಾಲವೂ ಸೇರಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಾರ್ಯಾಲಯ, ಜಿಲ್ಲಾ ಆಡಳಿತ ಭವನ 1ನೇ ಮಹಡಿ ರೂಮ್. ನಂ. 122/5 ಗದಗ ಡಾ: ಬಿ.ಆರ್.ಅಂ.ಅ.ನಿ ಸಂಪರ್ಕಿಸಲು ಕೋರಿದೆ. ಅಥವಾ ನಿಗಮದ ವೆಬ್ ಸೈಟ್ ಅಥವಾ ಕಲ್ಯಾಣ ಮಿತ್ರ ಏಕೀಕೃತ ಎಸ್.ಸಿ/ ಎಸ್.ಟಿ ಸಹಾಯವಾಣಿ 9482 300 400 ಸಂಪರ್ಕಿಸಬಹುದು.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 10-09-2025 ಅರ್ಜಿ ಸಲ್ಲಿಸುವ ವೆಬ್‌ಸೈಟ್ https://sevasindhu.karnataka.gov.in

2023-24 ಮತ್ತು 2024-25ನೇ ಸಾಲಿನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ನಿಗಮದ ನಿರ್ದೇಶಕರ ಮಂಡಳಿ ವಿವೇಚನಾ ಕೋಟಾ ಅಥವಾ ಸರ್ಕಾರದ ಸಾಂಸ್ಥಿಕ ಕೋಟಾದಡಿ ಸ್ವೀಕರಿಸುವ ಅರ್ಜಿಗಳನ್ನು ಸಹ ಸೇವಾ ಸಿಂದು ಪೋರ್ಟಲ್ ಮೂಲಕವೇ ಸಲ್ಲಿಸಲು ಜಿಲ್ಲಾ ವ್ಯವಸ್ಥಾಪಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವರಮಹಾಲಕ್ಷ್ಮೀ ಪೂಜೆಗೆ ಸಿದ್ಧತೆ




**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರಾವಣ ಮಾಸದ 2ನೇ ಶುಕ್ರವಾರ ಶ್ರದ್ಧಾ ಭಕ್ತಿಯಿಂದ ನೆರವೇರಿಸುವ ವರಮಹಾಲಕ್ಷ್ಮೀ ಪೂಜೆಯ ಪೂರ್ವ ಸಿದ್ಧತೆ-ಗಾಗಿ ಗುರುವಾರ ಪಟ್ಟಣದ ಮಾರುಕಟ್ಟೆಯಲ್ಲಿ ಹೆಂಗಳೆಯರು ಲಕ್ಷ್ಮೀ ಮೂರ್ತಿ, ಹೂವು, ಹಣ್ಣು, ಪೂಜಾ ಸಾಮಗ್ರಿ ಮತ್ತು ಅಲಂಕಾರಿಕ ವಸ್ತುಗಳ ಖರೀದಿ ನಡೆಸಿದರು.

ಹಣ್ಣುಗಳ ವ್ಯಾಪಾರಸ್ಥರು ಬಾಳೆ, ಸೇಬು, ಕಿತ್ತಳೆ, ಚಿಕ್ಕೂ, ಮೋಸಂಬಿ ಸೇರಿ 5 ತರಹದ ಹಣ್ಣುಗಳ ಸೆಟ್ ಮಾಡಿ 150ರಿಂದ 200 ರೂದಂತೆ ಮಾರಾಟ ಮಾಡಿದರು. 50ರೂಗೆ 2 ಬಾಳೆ ಕಂಬ ಮಾರಾಟ ಮಾಡಿದರು. ದಿನಸಿ, ಅಲಂಕಾರಿಕ ವಸ್ತುಗಳು, ವಿಳ್ಯದೆಲೆ, ಹೂವು, ಬಾಳೆ, ಕಬ್ಬುಗಳ ಬೆಲೆಯಲ್ಲೂ ಹೆಚ್ಚಳ ಕಂಡುಬಂದಿತು.

ಮುಖ್ಯ ಮಾರುಕಟ್ಟೆ ಮುಂದುವರೆದ ಭಾಗದಲ್ಲಿ ದುರಸ್ತಿ ಕಾರ್ಯ ನಡೆದಿರುವುದು ಮತ್ತು ಹಬ್ಬದ ಖರೀದಿಯಿಂದ ಇಡೀ ದಿನ ಮಾರ್ಕೆಟ್ ರಸ್ತೆ ಜನರಿಂದ ತುಂಬಿತ್ತು. ಉತ್ತಮ ಮಳೆ-ಬೆಳೆಯಿಂದ ಸಂತಸದಲ್ಲಿದಲ್ಲಿರುವ ರೈತ ಸಮುದಾಯ ಹಬ್ಬದ ಸಂಭ್ರಮಕ್ಕೆ ಅಣಿಯಾಗಿದ್ದಾರೆ.

## ವಿವಿಧ ಉತ್ಪನ್ನಗಳ ಪ್ರದರ್ಶನ, ಮಾರಾಟ

▸▸ ಮೊದಲನೇ ಪುಟದಿಂದ

ಸದರಿ ವಸ್ತು ಪ್ರದರ್ಶದಲ್ಲಿ ಗ್ರಾಮೀಣ ಸೂಕ್ಷ್ಮ ಮತ್ತು ಸಣ್ಣ/ ಗುಡಿ ಕೈಗಾರಿಕೆಗಳಿಗೆ, ವಿಶೇಷವಾಗಿ ಗ್ರಾಮೀಣ ಮತ್ತು ನಗರ ಸ್ವ-ಸಹಾಯ ಗುಂಪುಗಳು ತಯಾರಿಸುವ ಉತ್ಪನ್ನಗಳಿಗೆ ಪ್ರಚಾರ ನೀಡಿ ಮಾರುಕಟ್ಟೆ ಸೌಲಭ್ಯ ಒದಗಿಸುವ ದೃಷ್ಟಿಯಿಂದ ವಸ್ತು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ವಸ್ತು ಪದರ್ಶನದಲ್ಲಿ ಒಟ್ಟು 35 ಮಳಿಗೆಗಳನ್ನು ಕಾಯ್ದಿರಿಸಲಾಗಿದೆ. ವಸ್ತು ಪ್ರದರ್ಶನಕ್ಕೆ ಬೆಳಿಗ್ಗೆ 9.30ರಿಂದ ರಾತ್ರಿ 9ರವರೆಗೆ ಸಾರ್ವಜನಿಕರು ಭೇಟಿ ನೀಡಬಹುದು. ಈ ವಸ್ತುಪದರ್ಶನದಲ್ಲಿ ಗ್ರಾಮೀಣ ಸೂಕ್ಷ್ಮ ಮತ್ತು ಸಣ್ಣ / ಗುಡಿ ಕೈಗಾರಿಕೆಗಳು/ಮಹಿಳಾ ಉದ್ಯಮಿಗಳು ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನವನ್ನು ಪಡೆಯಲು ಕೋರಿದೆ.

ಆಸಕ್ತ ಉದ್ದಿಮೆದಾರರು ಮಳಿಗೆಯನ್ನು ಪಡೆಯಲು ಉಪ ನಿರ್ದೇಶಕರು (ಗ್ರಾ.ಕೈ) ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಗದಗ ಇವರ ಕಚೇರಿಗೆ ನಿಗದಿತ ನಮೂನೆಯ ಅರ್ಜಿಯನ್ನು ಪಡೆದು ಆಗಸ್ಟ್ 13ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್, ಗದಗ ಈ ಕಚೇರಿಯ ಮುಖ್ಯಸ್ಥರನ್ನು ಅಥವಾ ಕಚೇರಿ ದೂರವಾಣಿ ಸಂಖ್ಯೆ: 08372-220506 ಸಂಪರ್ಕಿಸಬಹುದಾಗಿದೆ.

## ಯೋಗ ಕೋರ್ಸ್‌ಗಳಿಗೆ ಪ್ರವೇಶ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರಕಾರದ ಮಾನ್ಯತೆ ಮತ್ತು ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರ ಸಂಯೋಜನೆಯಲ್ಲಿ ಬಸವ ಯೋಗ ಮಹಾವಿದ್ಯಾಲಯ ಗದಗ ವತಿಯಿಂದ 2025-26ನೇ ಸಾಲಿಗಾಗಿ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ ಮತ್ತು ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಕೋರ್ಸ್‌ಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಿದೆ.

ಯೋಗ ಸರ್ಟಿಫಿಕೇಟ್ ಕೋರ್ಸ್ ಪ್ರವೇಶ ಪಡೆಯಲು ಎಸ್.ಎಸ್.ಎಲ್.ಸಿ ಪಾಸಾಗಿರಬೇಕು. ಪಿ.ಜಿ ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಕೋರ್ಸ್ ಪ್ರವೇಶ ಪಡೆಯಲು ಯಾವುದೇ ವಿಶ್ವವಿದ್ಯಾಲಯದಿಂದ ಪದವಿ ಪಡೆದಿರಬೇಕು. ಈ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ವಯೋಮಿತಿಯ ನಿರ್ಬಂಧವಿಲ್ಲ. ಕೋರ್ಸುಗಳ ಅವಧಿ 1 ವರ್ಷ (ಎರಡು ಸೆಮಿಸ್ಟರ್).

ಪ್ರವೇಶ ಬಯಸುವ ಅಭ್ಯರ್ಥಿಗಳು ಅರ್ಜಿ ಜೊತೆಗೆ ತಮ್ಮ ವಿದ್ಯಾರ್ಹತೆಯ ಮಾರ್ಕ್ಸ್ ಕಾರ್ಡ್, ಆಧಾರ್ ಕಾರ್ಡ್ ಝರಾ-ಕ್ಸ್ ಪ್ರತಿ ಲಗತ್ತಿಸಬೇಕು. ಪ್ರವೇಶ ಅರ್ಜಿ ಸಲ್ಲಿಸಿದವರು ದಿನಾಂಕ 01-10-2025ರಂದು ನಡೆಸುವ ಪ್ರವೇಶ ಪರೀಕ್ಷೆ (Enterance Exam)ಗೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ-ಪ್ರಾಚಾರ್ಯರು, ಬಸವಯೋಗ ಮಹಾವಿದ್ಯಾಲಯ, ಗದಗ ದೂರವಾಣಿ ಸಂಖ್ಯೆ-9448317188, 7624822319 ಸಂಪರ್ಕಿಸಬಹುದು. ಪ್ರವೇಶಾವಕಾಶ (CYS-50, PGDYS-25) ಸೀಮಿತ ಇರುವದರಿಂದ ಅರ್ಹತೆಯುಳ್ಳವರಿಗೆ ಅವಕಾಶ ನೀಡಲಾಗುವುದು. ಪ್ರವೇಶ ಅರ್ಜಿ ಪಡೆಯಲು ಕೊನೆಯ ದಿನಾಂಕ 30-09-2025 ಆಗಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಕಾರ್ಮಿಕ ಇಲಾಖೆಯಲ್ಲಿ ಅಕ್ರಮ ಆಗಿಲ್ಲ,ದಾಖಲಾತಿ ಕೊಟ್ರೆ ತನಿಖೆ ಗ್ಯಾರಂಟಿ: ಸಚಿವ ಸಂತೋಷ್ ಲಾಡ್!

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕಾರ್ಮಿಕ ಇಲಾಖೆಯಲ್ಲಿ ಅಕ್ರಮ ಆರೋಪದ ಕುರಿತು ಸಚಿವ ಸಂತೋಷ್ ಲಾಡ್ ಪ್ರತಿಕ್ರಿಯೆ ಕೊಟ್ಟಿದ್ದಾರೆ. ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ನನ್ನ ಇಲಾಖೆಯಲ್ಲಿ ಯಾವುದೇ ಅಕ್ರಮ ಆಗಿಲ್ಲ. ಅಕ್ರಮದ ದಾಖಲಾತಿ ಕೊಟ್ಟರೆ ನಾನು ತನಿಖೆ ಮಾಡಿಸುತ್ತೇನೆ. ನಾನು ಮೋದಿ ವಿರುದ್ಧ ಮಾತನಾಡುತ್ತೇನೆ ಅಂತ ನನ್ನ ವಿರುದ್ಧ ಆರೋಪ ಮಾಡುತ್ತಿದ್ದಾರೆ. ದಾಖಲಾತಿಗಳು ಇದ್ದರೆ ಬಿಜೆಪಿ ಅವರು ಕೋರ್ಟ್‌ಗೆ ಹೋಗಲಿ. ಆರ್‌ಟಿಐ ಅನ್ನ ಈ ದೇಶದಲ್ಲಿ ಬಿಜೆಪಿ ಉಳಿಸಿದೆಯಾ ಎಂದು ಪ್ರಶ್ನಿಸಿದರು.

ಇವರು ಸುದ್ದಿಗೋಷ್ಠಿ ಮಾಡಿ ಆರೋಪ ಮಾಡಿದ ಕೂಡಲೇ ಸಿಬಿಐಗೆ ಕೊಡಬೇಕಾ? ಬಿಜೆಪಿ ಅವರು ದಾಖಲಾತಿ ಕೊಡಲಿ, ನಾನು ತನಿಖೆ ಮಾಡಿಸುತ್ತೇನೆ ಎಂದು ಸಂತೋಷ್ ಲಾಡ್ ತಿರುಗೇಟು ನೀಡಿದರು.

## ಸ್ತನ್ಯಪಾನದಿಂದ ರೋಗನಿರೋಧಕ ಶಕ್ತಿ ವೃದ್ಧಿ

▸▸ ಮೊದಲನೇ ಪುಟದಿಂದ

ಮೇಲೆ ಎದೆಹಾಲುಣಿಸುವಿಕೆಯ ಆಳವಾದ ಪ್ರಭಾವವನ್ನು ಬಿರಬಲ್ಲದು ಎಂಬುದನ್ನು ಸಂಶೋಧನೆಗಳು ದೃಢಪಡಿಸಿವೆ ಎಂದರು.

ಎದೆ ಹಾಲು ಶಿಶುಗಳನ್ನು ಸೋಂಕುಗಳಿಂದ ರಕ್ಷಿಸುತ್ತದೆ, ಅತಿಸಾರ, ಉಸಿರಾಟದ ಕಾಯಿಲೆಗಳು, ಕಿವಿ ಸೋಂಕುಗಳು ಮತ್ತು ಇತರ ಬಾಲ್ಯದ ಕಾಯಿಲೆಗಳ ಅಪಾಯವನ್ನು ಗಣನೀಯವಾಗಿ ಕಡಿಮೆ ಮಾಡುತ್ತದೆ. ಅಧ್ಯಯನಗಳು ಎದೆಹಾಲುಣಿಸುವಿಕೆಯು ಹೆಚ್ಚಿನ ಐಕ್ಯೂ ಅಂಕಗಳು, ಸುಧಾರಿತ ಅರಿವಿನ ಕಾರ್ಯ ಮತ್ತು ಉತ್ತಮ ಶೈಕ್ಷಣಿಕ ಕಾರ್ಯಕ್ಷಮತೆಗೆ ಸಂಬಂಧ ಹೊಂದಿದೆ ಎಂದರು.

ಕಾರ್ಯಕ್ರಮದಲ್ಲಿ ಮಹಿಳೆಯರು ಹಾಗೂ ಆಸ್ಪತ್ರೆಯ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಆ.13ರಂದು ಲಕ್ಷ್ಮೇಶ್ವರದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ದಿನಾಂಕ:13-08-2025ರ ಬುಧವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 01.00 ಗಂಟೆಯ ವರೆಗೆ "ಪುರಸಭೆ ಲಕ್ಷ್ಮೇಶ್ವರದಲ್ಲಿ " ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# 24ನೇ ವಾರ್ಷಿಕ ಸರ್ವ ಸದಸ್ಯರ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಲಾರಿ ಮಾಲಿಕರ ಮತ್ತು ಸಾಗಾಣಿಕೆದಾರರ ವಿವಿಧೋದ್ದೇಶಗಳ ಸಹಕಾರ ಸಂಘ ನಿ, ಗದಗ ಇದರ 24ನೇ ವಾರ್ಷಿಕ ಸರ್ವ ಸದಸ್ಯರ ಸಭೆಯು ಆಗಸ್ಟ್ 9ರಂದು ಮಧ್ಯಾಹ್ನ 12.30 ಗಂಟೆಗೆ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರ ಸ್ಟೇಡಿಯಂ ಎದುರಿಗೆ ಜರುಗಲಿದೆ. ಈ ಸಭೆಗೆ ಸಂಘದ ಸದಸ್ಯರು ಹಾಜರಾಗಬೇಕೆಂದು ವ್ಯವಸ್ಥಾಪಕ ಶಂಕರ ಶ್ಯಾಗೋಟಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ಗ್ರಾಮದ ಮನೆ, ಹೋಟೆಲ್, ದಿನಸಿ ಅಂಗಡಿಗೆ ತೆರಳಿ ಕಸ ವಿಲೇವಾರಿ ಕುರಿತು ಜಾಗೃತಿ ಮೂಡಿಸಿದ ಇಓ ಚಂದ್ರಶೇಖರ ಕಂದಕೂರು

# ಗ್ರಾಮದ ಸ್ವಚ್ಛತೆಗೆ ಗ್ರಾ.ಪಂ ಜೊತೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗ್ರಾಮೀಣ ಪ್ರದೇಶಗಳು ಶುಚಿತ್ವದಿಂದ ಕೂಡಿದ್ದರೆ ಗ್ರಾಮದಲ್ಲಿ ಯಾವುದೇ ಸಾಂಕ್ರಾಮಿಕ ರೋಗ ಹರಡಲು ಸಾಧ್ಯವಾಗದು. ಗ್ರಾಮಕ್ಕೆ ರೋಗದ ಆಹ್ವಾನ ನೀಡುವವರು ಗ್ರಾಮದಲ್ಲಿ ಎಲ್ಲೆಂದರಲ್ಲಿ ಕಸ ಬಿಸಾಡುತ್ತಾರೆ. ಗ್ರಾಮಕ್ಕೆ ಯಾವುದೇ ರೋಗ ಬರಬಾರದು ಎನ್ನುವವರು ಗ್ರಾ.ಪಂ ನೀಡುವ ಮಾರ್ಗದರ್ಶನದಂತೆ ಕಸ ವಿಲೇವಾರಿ ಮಾಡಿ ತಮ್ಮ ಗ್ರಾಮವನ್ನು ಸ್ವಚ್ಛವಾಗಿಟ್ಟುಕೊಳ್ಳುತ್ತಾರೆ. ಇಡೀ ಗ್ರಾಮವೇ ಸ್ವಚ್ಛತೆಯಿಂದ ಕೂಡಿದ್ದರೆ ಗ್ರಾಮದ ಮಕ್ಕಳ ಭವಿಷ್ಯವು ಉಜ್ವಲವಾಗಿರುತ್ತದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ, ಕಂದಕೂರು ಜಾಗೃತಿ ಮೂಡಿಸಿದರು.



ಗುರುವಾರ ಬೆಳಂಬೆಳಿಗ್ಗೆ ಮಾರನಬಸರಿ ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ, ಉದ್ಯೋಗ ಖಾತರಿ ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ, ಪಿಡಿಓ ಎಸ್.ಆರ್. ಸಂಕನೂರ ಅವರ ಜೊತೆಗೂಡಿ ಮಾರನಬಸರಿ ಗ್ರಾಮದ ಹಳೆ ಪಂಚಾಯಿತಿ ಆವರಣ, ಬಸವೇಶ್ವರ ಓಣಿ, ಸಂಗೊಳ್ಳಿ ರಾಯಣ್ಣ ವೃತ್ತ ಹಾಗೂ ಬಸ್ ನಿಲ್ದಾಣದ ಸುತ್ತಮುತ್ತಲಿನ ಮನೆಗಳಿಗೆ ತೆರಳಿ ಕಸ ವಿಲೇವಾರಿ ಬಗ್ಗೆ ಅರಿವು ಮೂಡಿಸಿದರು.

ಮನೆಯಲ್ಲಿ ಬಳಸಿ ಬೇಡವಾದ ಕಸವನ್ನು ಒಣ ಕಸ ಮತ್ತು ಹಸಿ ಕಸ ಎಂದು ಬೇರ್ಪಡಿಸಿ. ಒಣ ಕಸ ಮತ್ತು ಹಸಿ ಕಸ ಸಂಗ್ರಹಕ್ಕೆ ಗ್ರಾ.ಪಂ ವತಿಯಿಂದ ಪ್ರತ್ಯೇಕವಾಗಿ ಕಸದಬುಟ್ಟಿ ನೀಡಿದ್ದಾರೆ. ಸ್ವಚ್ಛತೆಗಾರರ ಮೂಲಕ ಕಸದವಾಹಿನಿಗೆ ಕಸ ಹಾಕಿ. ಮನೆ-ಗ್ರಾಮ ಕಸ ಮುಕ್ತವಾದರೆ ಗ್ರಾಮದ ವಾತಾವರಣ ಆರೋಗ್ಯಯುತವಾಗುತ್ತದೆ. ಇದಕ್ಕೆ ಮಾರನಬಸರಿ ಗ್ರಾ.ಪಂ ಸಿಬ್ಬಂದಿ ಶ್ರಮಿಸುತ್ತಿದ್ದು, ಗ್ರಾಮಸ್ಥರು ಕೂಡಾ ಕೈಜೋಡಿಸಿದಾಗ ಮಾತ್ರ ಗಾಂಧೀಜಿ ಕಂಡ ಗ್ರಾಮಗಳ ಅಭಿವೃದ್ಧಿ ಕನಸು ಕಾಣಲು ಸಾಧ್ಯ ಎಂದು ಗ್ರಾಮಸ್ಥರಲ್ಲಿ ತಿಳುವಳಿಕೆ ಮೂಡಿಸಿದರು.

ಕಿರಾಣಿ ಅಂಗಡಿ, ಹೋಟೆಲ್‌ಗಳಿಗೆ ತೆರಳಿ ಮಾಲೀಕರಲ್ಲಿ ಸ್ವಚ್ಛತೆಯ ಪಾಠ ಮಾಡಿದ ಇಓ ಚಂದ್ರಶೇಖರ ಕಂದಕೂರ, ಪ್ಲಾಸ್ಟಿಕ್ ಕವರ್‌ಗಳನ್ನು ಹೊರಗಡೆ ಬಿಸಾಡದೇ ಕಸದಬುಟ್ಟಿಯಲ್ಲಿ ಸಂಗ್ರಹಿಸಿ, ಅಂಗಡಿಗೆ ಬರುವ ಗ್ರಾಹಕರಲ್ಲಿ ಪ್ಲಾಸ್ಟಿಕ್ ಹಾಳೆ ತರದೆ ಪರಿಸರ ಸ್ನೇಹಿ ಕೈಚೀಲ ತಂದು ದಿನಸಿ ಖರೀದಿಸುವ ಬಗ್ಗೆ ತಿಳುವಳಿಕೆ ಮೂಡಿಸಿ ಎಂದರು. ಈ ಸಂದರ್ಭದಲ್ಲಿ ಮಾರನಬಸರಿ ಗ್ರಾ.ಪಂನ ಉಪಾಧ್ಯಕ್ಷೆ ಮಂಜುಳಾ ಹಾದಿಮನಿ, ಸದಸ್ಯರಾದ ಶಿವಕುಮಾರ ದಿಂಡೂರು, ಅಲ್ಲಾಸಾಬ ಬೋತೇಖಾನ್, ವೀರಪ್ಪ ನಿಡಗುಂದಿ, ದಿಲ್ಷಾದ್ ದೋಟಿಹಾಳ್, ಫಾತೀಮಾ ಸವಡಿ, ಹನಮ್ಮಪ್ಪ ತಳವಾರ ಮತ್ತು ಗ್ರಾ.ಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಮಹಿಳಾ ಸಬಲೀಕರಣಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸ್ವಚ್ಛ ಭಾರತ್ ಮಿಶನ್ ಅಡಿ ಕಸ ವಿಲೇವಾರಿ ವಾಹನಕ್ಕೆ ಮಹಿಳಾ ಡ್ರೈವರಗಳನ್ನೇ ನೇಮಕ ಮಾಡಲಾಗಿದ್ದು, ಮಾರನಬಸರಿ ಕಸದ ವಾಹಿನಿ ಡ್ರೈವರ್ ಗೀತಾ ಹಾದಿಮನಿ ಅವರ ಜೊತೆ ಇಓ ಚಂದ್ರಶೇಖರ ಕಂದಕೂರ ಸಮಾಲೋಚನೆ ನಡೆಸಿ ಪ್ರಾಮಾಣಿಕವಾಗಿ ತಮ್ಮ ಕೆಲಸವನ್ನು ನಿರ್ವಹಿಸುವಂತೆ ಸೂಚಿಸಿದರು.

### ಗೃಹ ಪ್ರವೇಶದ ನಿಮಿತ್ತ ಕನ್ನಡ ಧ್ವಜಾರೋಹಣ, ವನಮಹೋತ್ಸವ, ಪುಸ್ತಕ ಬಿಡುಗಡೆ

# ಕನ್ನಡ ಮಾಧ್ಯಮ ಕಲಿಕೆಗೆ ಪ್ರೋತ್ಸಾಹ ಅಗತ್ಯ




ಬಳ್ಳಾರಿ ಕಸಾಪ ಅಧ್ಯಕ್ಷ ನಿಷ್ಠಿ ರುದ್ರಪ್ಪನವರು ಮಾತನಾಡಿ, ಡೆಪ್ಯುಟಿ ಚನ್ನಬಸಪ್ಪನವರು ಈ ಪ್ರದೇಶದಲ್ಲಿ ಕನ್ನಡ ಶಾಲೆಗಳನ್ನು ಸ್ಥಾಪಿಸುವ ಮೂಲಕ ಕನ್ನಡ ವಾತಾವರಣವನ್ನು ನಿರ್ಮಿಸಿದರು. ಆದರೆ, ಇಂದು ಅದೇ ಕನ್ನಡ ಶಾಲೆಗಳನ್ನು ಕಳೆದುಕೊಳ್ಳುತ್ತಿರುವದು ವಿಪರ್ಯಾಸ. ಇಂಗ್ಲೀಷನ್ನು ಒಂದು ಭಾಷೆಯನ್ನಾಗಿ ಕಲಿಸಬೇಕೇ ವಿನಃ ಮಾಧ್ಯಮವನ್ನಾಗಿ ಅಲ್ಲ ಎಂಬುದನ್ನು ಸಮಾಜ ಮತ್ತು ಸರಕಾರ ಅರಿಯಬೇಕು ಎಂದು ಅಭಿಪ್ರಾಯಟ್ಟರು.

■ವಿಜಯಸಾಕ್ಷಿ ಸುದ್ದಿ, ಗದಗ

ಭಾಷಾ ಬೆಳವಣಿಗೆಯ ಹಿನ್ನೆಲೆಯಲ್ಲಿ ಪ್ರಾಥಮಿಕ ಶಾಲೆಗಳ ಪಾತ್ರ ಮಹತ್ವದ್ದು. ಇಂಗ್ಲೀಷ್ ವ್ಯಾಮೋಹಕ್ಕೆ ಒಳಗಾಗಿರುವ ಪಾಲಕರು ಆಂಗ್ಲ ಮಾಧ್ಯಮದ ಕಡೆಗೆ ವಾಲುತ್ತಿದ್ದಾರೆ. ಇದನ್ನರಿತ ಸರಕಾರ ಕೂಡಾ ಸರಕಾರಿ ಶಾಲೆಗಳಲ್ಲಿ ಆಂಗ್ಲ ಮಾಧ್ಯಮವನ್ನು ಪ್ರಾರಂಭಿಸಿದೆ. ಇದರಿಂದ ಸೃಜನಶೀಲ ಅಭಿವ್ಯಕ್ತಿಗೆ ಮತ್ತು ಸಂಸ್ಕೃತಿಗೆ ಹಿನ್ನೆಡೆ ಉಂಟಾಗುತ್ತಿದೆ. ಕನ್ನಡ ಮಾಧ್ಯಮದ ಶಾಲೆಗಳಲ್ಲಿ ಇಂಗ್ಲೀಷನ್ನು ಒಂದು ಭಾಷೆಯನ್ನಾಗಿ ಪರಿಣಾಮಕಾರಿಯಾಗಿ ಕಲಿಸುವ ಮೂಲಕ ಪಾಲಕರ ಮನಸ್ಥಿತಿಯನ್ನು ಬದಲಾಯಿಸುವ ಅವಶ್ಯಕತೆ ಇದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ಹಾಗೂ ಉಮಾದೇವಿ ಪಾಟೀಲ ಇವರ ಗೃಹಪ್ರವೇಶದ ಕಾರ್ಯಕ್ರಮದಲ್ಲಿ ಲೋಹಿತಾ ಪ್ರಕಾಶನ ಬಳ್ಳಾರಿ ಇವರು ಪ್ರಕಟಿಸಿರುವ 'ಶಿಕ್ಷಣದಲ್ಲಿ ಕನ್ನಡ ಮಾಧ್ಯಮ ಏಕೆ ಬೇಕು? ಹೇಗೆ ಸಾಧ್ಯ?' ಎಂಬ ಗ್ರಂಥವನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ಕರ್ನಾಟಕ ಏಕೀಕರಣ ಸಂದರ್ಭದಲ್ಲಿ ಕನ್ನಡ ಶಾಲೆಗಳ ಸ್ಥಾಪನೆಯಿಂದ ಮರಾಠಿ ಶಾಲೆಗಳ ಪ್ರಭಾವ ಕಡಿಮೆಯಾದುದನ್ನು ಮರೆಯಬಾರದು ಎಂದು ಶ್ರೀಗಳು ತಿಳಿಸಿದರು. ವೇದಿಕೆ ಮೇಲೆ ಭೈರನಹಟ್ಟಿ ಹಾಗೂ ಶಿರೋಳದ ಮ. ನಿ. ಪ್ರ. ಶಾಂತಲಿಂಗ ಮಹಾಸ್ವಾಮಿಗಳು, ಮೈಸೂರಿನ ಶಾಸ್ತ್ರೀಯ ಸ್ಥಾನಮಾನ ಸಂಸ್ಥೆಯ ನಿರ್ದೇಶಕ ಡಾ. ನೀಲಗಿರಿ ತಳವಾರ, ಸಾಹಿತಿ ಪ್ರೊ. ಚಂದ್ರಶೇಖರ ವಸ್ತ್ರದ ಉಪಸ್ಥಿತರಿದ್ದರು. ಗೃಹಪ್ರವೇಶದ ಅಂಗವಾಗಿ ವನಮಹೋತ್ಸವ, ಕನ್ನಡ ಧ್ವಜಾರೋಹಣ, ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ನೆರವೇರಿಸಲಾಯಿತು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ದತ್ತಪ್ರಸನ್ನ ಪಾಟೀಲ ಸ್ವಾಗತಿಸಿದರು. ಕಿಶೋರಬಾಬು ನಾಗರಕಟ್ಟಿ ವಂದಿಸಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧ್ಯಕ್ಷತೆಯಲ್ಲಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ (ಎಸ್‌ಸಿಪಿ/ಟಿಎಸ್‌ಪಿ) ಪ್ರಗತಿ ಪರಿಶೀಲನಾ ಸಭೆ ಜರುಗಿತು. ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೋಟೂರ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ತಹಸೀಲ್ದಾರರ ಪಕ್ಷಪಾತಕ್ಕೆ ವಿರೋಧ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಕಪ್ಪತ್ತಗುಡ್ಡದ ಪ್ರದೇಶದಲ್ಲಿರುವ ಶ್ರೀ ಕಪ್ಪತ್ತ ಮಲ್ಲೇಶ್ವರ ದೇವಸ್ಥಾನವು ವಂಶ ಪಾರಂಪರಿಕವಾಗಿದ್ದು, ಇದರ ವಾರಸುದಾರರರಾದ ಮಲ್ಲಿಕಾರ್ಜುನ ಸ್ವಾಮಿ ಮತ್ತು ಶ್ರೀಕಾಂತ ಸ್ವಾಮಿಗಳು ಸಮಾನ ಹಕ್ಕುಗಳನ್ನು ಹೊಂದಿದ್ದಾರೆ. ಇತ್ತೀಚೆಗೆ ಕೆಲ ಭಕ್ತರು ಸರಕಾರಿ ಅಧಿಕಾರಿಗಳ ಮೂಲಕ ಒತ್ತಡ ಹೇರಿ, ದೇವಸ್ಥಾನವು ಮಲ್ಲಿಕಾರ್ಜುನ ಸ್ವಾಮಿಗಳಿಗೆ ಮಾತ್ರ ಸೇರಿದ್ದು ಎಂದು ಹೇಳುತ್ತಿದ್ದಾರೆ.

ಕಾಕತಾಳೀಯವೆಂಬತೆ ತಹಸೀಲ್ದಾರರು ಕೂಡ ಅವರ ಪರವಾಗಿಯೇ ಮಾತನಾಡುತ್ತಿದ್ದು, ಆಗಸ್ಟ್ 14ರಂದು ನಡೆಯಲಿರುವ ಜಾತ್ರಾ ಮಹೋತ್ಸವಕ್ಕೆ ಕೆಲ ಭಕ್ತರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ತಹಸೀಲ್ದಾರರು ಒಬ್ಬರ ಪರವಾಗಿ ನಿಂತಿರುವುದನ್ನು ವಿರೋಧಿಸಿ ದಲಿತ ಮಿತ್ರ ಮೇಳದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲಾಧಿಕಾರಿಗಳು ಮಧ್ಯಸ್ಥಿಕೆ ವಹಿಸಿ ಸಮಸ್ಯೆಯನ್ನು ಬಗೆಹರಿಸಿ ಇಬ್ಬರಿಗೂ ಸಮ ಬಾಳು-ಸಮ ಪಾಲು ನೀಡಿ ಜಾತ್ರಾ ಮಹೋತ್ಸವವನ್ನು ಸುಗಮವಾಗಿ ನಡೆಸಲು ಅನುಕೂಲ ಮಾಡಿಕೊಡಬೇಕೆಂದು ಮನವಿಯಲ್ಲಿ ವಿನಂತಿಸಿದರು. ಈ ಸಂದರ್ಭದಲ್ಲಿ ದಲಿತ ಮಿತ್ರ ಮೇಳದ ಅಧ್ಯಕ್ಷ ಕುಮಾರ್ ನಡಗೇರಿ, ಹುಲಗಪ್ಪ ವಾಲ್ಮೀಕಿ, ಸದಾನಂದಸಿಂಗ್ ಗುರುಲಹೂಸುರ್, ಮಂಜುನಾಥ್ ಬಂಡಿವಡ್ಡರ್, ವಿಶಾಲ್ ಗೋಕಾವಿ, ಕೃಷ್ಣಾ ಹುಯಿಲಗೋಳ, ಪಂಚಾಕ್ಷರಿ ಸಾಲಿಮಠ, ನಿಖಿಲ್ ಕೋಟಿ, ರವಿ ಬಂಡಿವಡ್ಡರ, ಆನಂದ ಹುಡೇದ, ಪ್ರಭು ಭಂಗಿ, ಪ್ರವೀಣ ಹುಡೇದ, ಶಿವು ಬಂಗಾರಿ, ಅಕ್ಷಯ್ ವಡ್ಡರ ಮುಂತಾದವರು ಇದ್ದರು.

# ಶ್ರೇಷ್ಠ ಆಚರಣೆ ನಾಡಿನ ಪ್ರತೀಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಾತಿ ಪದ್ಧತಿ, ಮೂಢನಂಬಿಕೆಗಳು, ಅಂಧಾ ಚರಣೆಗಳು, ಜಡ್ಡುಗಟ್ಟಿದ ಸಂಪ್ರದಾಯ ಆಚರಣೆಗಳ ವಿರುದ್ಧ 12ನೇ ಶತಮಾನದಲ್ಲಿಯೇ ಶರಣರು ಸಿಡಿದೆದ್ದು ಸಮಾನತೆ, ವೈಜ್ಞಾನಿಕತೆ, ಮಾನವೀಯ ಮೌಲ್ಯಗಳನ್ನೊಳಗೊಂಡ ಸಮಸಮಾಜ ನಿರ್ಮಾಣಕ್ಕೆ ತಮ್ಮನ್ನು ಸಮರ್ಪಿಸಿಕೊಂಡರು ಎಂದು ಸಾಹಿತಿ, ನಿವೃತ್ತ ಮುಖ್ಯೋಪಾಧ್ಯಾಯ ರಮೇಶ ನವಲೆ ಹೇಳಿದರು.

ಅವರು ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಬುಧವಾರ 20ನೇ ವರ್ಷದ ಶ್ರಾವಣ ಸಂಜೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.

ಧರ್ಮ, ಸಂಸ್ಕಾರ, ಸಂಸ್ಕೃತಿ-ಸಂಪ್ರದಾಯಗಳ ಶ್ರೇಷ್ಠ ಆಚರಣೆ, ಪರಂಪರೆ ನಾಡಿನ ಪ್ರತೀಕವಾಗಿದೆ. ಈ ನಡುವೆಯೂ ಅನೇಕ ಕೆಲವು ಗೊಡ್ಡು ಸಂಪ್ರದಾಯ, ಆಚರಣೆಗಳನ್ನು ಹೊಡೆದೋಡಿಸಲು ಶರಣರು ಶ್ರಮಿಸಿದ್ದಾರೆ. ಇಂದಿನ ಶೈಕ್ಷಣಿಕ, ವೈಜ್ಞಾನಿಕ, ವೈಚಾರಿಕ ಪ್ರಜ್ಞೆಯುಳ್ಳ ಸಮಾಜ ಯಾವುದು ಸರಿ-ತಪ್ಪು ಎಂಬ ಪ್ರಜ್ಞಾವಂತಿಕೆಯ ಆಯ್ಕೆ-ಆಚರಣೆ ಪಾಲನೆ ಮಾಡಬೇಕಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ಬಂಡಾಯ ಸಾಹಿತಿ ಸಿ.ಜಿ. ಹಿರೇಮಠ ಮಾತನಾಡಿ, ಸಂಪ್ರದಾಯದ ಜೊತೆಗೆ ಆಧುನಿಕತೆಯೂ ಬೇಕು. ಎರಡನ್ನೂ ಸಮಾನತೆಯಿಂದ ಸ್ವೀಕರಿಸಿ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಸಾಹಿತಿ ಪೂರ್ಣಾಜಿ ಖರಾಟೆ ಗಂಗಾಧರ ಅರಳಿ, ನಿಂಗಪ್ಪ ಗೊರವರ ಅಂದಾನಪ್ಪ, ಎಸ್.ಎಸ್. ವಾಲಿಶೆಟ್ಟರ, ಶರಣಪ್ಪ ಹಸರೆಡ್ಡಿ, ಪ್ರತಿಮಾ ಮಹಾಜನಶೆಟ್ಟರ ಲಲಿತಕ್ಕ ಕೆರಿಮನಿ, ವೀಣಾ ಹತ್ತಿಕಾಳ, ನಿರ್ಮಲಾ ಅರಳಿ, ಅನ್ನಪೂರ್ಣ ಓದುನವರ, ಡಿ.ಎಫ್. ಪಾಟೀಲ, ಅಶೋಕ ಸೊರಟೂರ, ಶಿವಲಿಂಗಯ್ಯ ಹೊತಗಿಮಠ, ಸೋಮಣ್ಣ ಯತ್ತಿನಹಳ್ಳಿ, ಸಚ್ಚಿದಾನಂದ ಇದ್ದರು. ಅರುಂಧತಿ ಬಿಂಕದಕಟ್ಟಿ, ನಂದಿನಿ ಮಾಳವಾಡ, ರತ್ನಾ ಕರ್ಕಿ, ಜಯಶ್ರೀ ಮತ್ತಿಕಟ್ಟಿ ನಿರ್ವಹಿಸಿದರು.





ಕನಕದಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ಎಫ್. ದಂಡಿನ ಅವರಿಗೆ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರರು 90ನೇ ಜನ್ಮದಿನದ ಶುಭಾಶಯಗಳನ್ನು ಕೋರಿ ಸನ್ಮಾನಿಸಿದರು.

# ಜಿ.ಪಿ.ಎಸ್ ಅಳವಡಿಕೆಗೆ ಕೊಟೇಶನ್ ಆಹ್ವಾನ


■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಮನೆ ಮನೆಯಿಂದ ವಾಹನದ ಮೂಲಕ ಸಂಗ್ರಹಣೆ ಮಾಡಲು, ವಾಣಿಜ್ಯ ಪ್ರದೇಶದಲ್ಲಿ, ಬಾರ್, ಅಂಗಡಿ ತ್ಯಾಜ್ಯ, ಚಿಕನ್ ಅಂಗಡಿ ತ್ಯಾಜ್ಯ ಮತ್ತು ಮಾರ್ಕೆಟ್ ಏರಿಯಾದಲ್ಲಿ ಹಾಗೂ ಪಟ್ಟಣದಲ್ಲಿ ಉತ್ಪಾದನೆಯಾಗುವ ಎಲ್ಲ ತರಹದ ತ್ಯಾಜ್ಯವನ್ನು ಕಾರ್ಯಾಲಯದ ವಾಹನಗಳ ಮೂಲಕ ಸಂಗ್ರಹಣೆ ಮಾಡಿ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ತ್ಯಾಜ್ಯ ವಿಲೇವಾರಿ ಮಾಡಲು ವಾಹನಗಳು ಕಾರ್ಯ ನಿರ್ವಹಿಸುತ್ತಿವೆ.

ಸದರಿ ವಾಹನಗಳು ಪಟ್ಟಣದಲ್ಲಿ ಚಲಿಸಿದ ಬಗ್ಗೆ ಮತ್ತು ತ್ಯಾಜ್ಯ ವಿಲೇವಾರಿ ಘಟಕಕ್ಕೆ ತೆರಳಿದ ಬಗ್ಗೆ ಮೇಲ್ವಿಚಾರಣೆ ಮಾಡಲು ಆರೋಗ್ಯ ಶಾಖೆಯ 10 ವಾಹನಗಳಿಗೆ ಜಿ.ಪಿ.ಎಸ್ ಅಳವಡಿಸುವ ಕುರಿತು ಜಿ.ಎಸ್.ಟಿಯನ್ನು ಒಳಗೊಂಡಂತೆ ಪುರಸಭೆ ಕಾರ್ಯಾಲಯಕ್ಕೆ ಆಗಸ್ಟ್ 12ರ ಸಾಯಂಕಾಲ 5 ಗಂಟೆಯೊಳಗಾಗಿ ಶೀಲು ಬಂದ್ ಲಕೋಟೆಯಲ್ಲಿ ಕೊಟೇಶನ್‌ನ್ನು ಸಲ್ಲಿಸಲು ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಕಾರ್ಯಕ್ರಮದಲ್ಲಿ ಅಂಗರಾಜ ಪಾಟೀಲ ಮಲ್ಲಾಪೂರ

# ಸಾಂಸ್ಕೃತಿಕ ಭಾರತಕ್ಕೆ ನೇಕಾರರ ಕೊಡುಗೆ ಅಪಾರ



ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿ, ಬಹುರಾಷ್ಟ್ರೀಯ ಕಂಪನಿಗಳ ಊತ್ಪನ್ನಗಳನ್ನು ಆನ್‌ಲೈನ್ ಮೂಲಕ ತರಿಸಿಕೊಳ್ಳುವ ಪರಿಪಾಠವನ್ನ ಬಿಟ್ಟು ಗುಣಮಟ್ಟದ ದೇಶೀಯ ಬಟ್ಟೆಗಳನ್ನು ಹೆಚ್ಚು ಹೆಚ್ಚು ಬಳಸಬೇಕು ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ತಮ್ಮ ಕರಕುಶಲತೆಯ ಮೂಲಕ ವಿಶಿಷ್ಟ ಉಡುಗೆ-ತೊಡುಗೆಯ ಉತ್ಪನ್ನಗಳನ್ನು ತಯಾರಿಸುವ ನೇಕಾರರು ಭಾರತದ ಸಂಸ್ಕೃತಿಯನ್ನು ವಿಶ್ವ ಮಟ್ಟಕ್ಕೆ ಪರಿಚಯಿಸುವ ಮೂಲಕ ಸಾಂಸ್ಕೃತಿಕ ಹಾಗೂ ಸಾಂಪ್ರದಾಯಿಕ ಭಾರತಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ ಹೇಳಿದರು.

ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಹಾಗೂ ಜಿಲ್ಲಾ ಯುವ ಮೋರ್ಚಾ ವತಿಯಿಂದ ಬೆಟಗೇರಿ ಈರಣ್ಣ ಕೊನಾ ಕೈಮಗ್ಗ ಆವರಣದಲ್ಲಿ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

1905ರಲ್ಲಿ ಸ್ವದೇಶಿ ಚಳುವಳಿ ಪ್ರೇರಣೆಯಿಂದ ದೇಶದಾದ್ಯಂತ ಸ್ಥಾಪನೆಯಾದ ಕೈಮಗ್ಗ ವಲಯವು ಇಂದು ಅತಿ ಹೆಚ್ಚು ಉದ್ಯೋಗ ಸೃಷ್ಟಿಸುವ ಉದ್ಯಮವಾಗಿ ರೂಪಗೊಂಡಿದ್ದಕ್ಕೆ ನೇಕಾರರ ಶ್ರಮ, ಶ್ರದ್ಧೆಯೇ ಕಾರಣ. ಶ್ರಮಶೀಲ ನೇಕಾರರ ಜೀವನ ಶೈಲಿ ಹಾಗು ಉತ್ಪಾದನಾ ಸಾಮರ್ಥ್ಯ ಹೆಚ್ಚಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜಾರಿಗೆ ತಂದ ಯೋಜನೆಗಳಿಂದ ತಂತ್ರಜ್ಞಾನ ನೆರವು, ರಫ್ತು, ಇ-ಮಾರ್ಕೆಟಿಂಗ್, ವಿನ್ಯಾಸ ಇನ್‌ಪುಟ್, ಮಾರುಕಟ್ಟೆ ನೆರವು ಮುಂತಾದವುಗಳಿಂದ ಇಂದು ಕೈಮಗ್ಗ ವಲಯವು ದೇಶಿಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸ್ವಾವಲಂಬನೆ ಸಾಧಿಸಲು ಸಾಧ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ ಮಾತನಾಡಿ, ಸ್ಥಳೀಯವಾಗಿ ತಯಾರಿಸಲ್ಪಟ್ಟ ಕೈಮಗ್ಗ ಉತ್ಪನ್ನಗಳನ್ನ ಖರೀದಿಸುವ ಮೂಲಕ ನೇಕಾರರ ಕೌಶಲ್ಯ, ಉದ್ಯಮದ ಬೆಳವಣಿಗೆಗೆ ನಾವು ಉತ್ತೇಜನ ನೀಡಬೇಕು ಎಂದರು.

ಇದೇ ಸಂದರ್ಭದಲ್ಲಿ ವಿಶಿಷ್ಟ ಸಾಧನೆಗಾಗಿ ಕೈಮಗ್ಗ ಉದ್ಯಮಿ ರಾಜೇಶ್ವರಿ ಕೊನಾ ಅವರನ್ನು ಪಕ್ಷದ ವತಿಯಿಂದ ಸನ್ಮಾನಿಸಲಾಯಿತು. ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಹಿರಿಯರಾದ ಜಗನ್ನಾಥಸಾ ಬಾಂಡಗೆ, ಶಂಕರ ಕಾಕಿ, ದೇವೇಂದ್ರಪ್ಪ ಗೋಟೂರ, ವಿಜಯಲಕ್ಷ್ಮೀ ಮಾನ್ವಿ, ಪ್ರೀತಿ ಹೊನಗುಡಿ ಮಾತನಾಡಿದರು.

ನಗರಸಭಾ ಸದಸ್ಯರಾದ ಮಾಧುಸಾ ಮೇರವಾಡೆ, ವಿದ್ಯಾವತಿ ಗಡಗಿ, ಮುಖಂಡರಾದ ವಂದನಾ ವರ್ಣೇಕರ, ನರಸಿಂಗ ಮೇರವಾಡೆ, ಈರಣ್ಣ ಕೋನ, ರಾಜೇಶ್ವರಿ ಕೋನ, ಸುಧಾ ಮೇರವಾಡೆ, ಸ್ವಾತಿ ಅಕ್ಕಿ, ರಮೇಶ ಸಜ್ಜಗಾರ, ಅಮರನಾಥ ಗಡಗಿ, ರವಿ ಮಾನ್ವಿ, ದೇವೇಂದ್ರಪ್ಪ ಹೂಗಾರ ಮುಂತಾದವರು ಪಾಲ್ಗೊಂಡಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka